ಸಂಪುಟ : 10 ಸಂಚಿಕೆ: 254 ಪುಟ : 4+2 ಬೆಲೆ: 3.00 ಶುಕ್ರವಾರ ನವೆಂಬರ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 254 Pages : 4+2 Price : 3.00 Friday November 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನ.23ರಂದು ನಾಗಯ್ಯಜ್ಜನವರ ಪುಣ್ಯ ಸ್ಮರಣೆ, ವಾರ್ಷಿಕೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಕಾಯಕ ಜೀವಿ ಲಿಂ.ಲೋಕಿಕೆರೆ ನಾಗಯ್ಯಜ್ಜನವರ 16ನೇ ಪುಣ್ಯಸ್ಮರಣೋತ್ಸವ ಹಾಗೂ ನಾಗಯ್ಯಜ್ಜನವರ ಸೇವಾ ಸಮಿತಿಯ 2ನೇ ವಾರ್ಷಿಕೋತ್ಸವ ಕಾರ್ಯಕ್ರಮ ನ.23 ರಂದು ರವಿವಾರ ಸಾಯಂಕಾಲ 5.30ಕ್ಕೆ ಗದಗನ ಎಪಿಎಂಸಿ ಯಾರ್ಡ್‌ನ ಎಸ್.ಬಿ. ಸಂಕಣ್ಣವರ ಲೇಔಟ್‌ನಲ್ಲಿರುವ ಶ್ರೀ ಮಹಾಗಣಪತಿ ಸೇವಾ ಸಂಘದ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಅಡ್ನೂರ-ರಾಜೂರ-ಗದಗ ದಾಸೋಹಮಠದ ಪೂಜ್ಯ ಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ.ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು.

ಶ್ರೀ ಮಹಾಗಣಪತಿ ಸೇವಾ ಸಂಘದ ಅಧ್ಯಕ್ಷರಾದ ದೀಪಕ ಬ. ಕಳಸಣ್ಣವರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ. ಮಹಾಂತೇಶ, ಗದಗ ಎಸ್‌ಬಿಐ (ಗ್ರಾಮೀಣ ವ್ಯವಹಾರ) ಬಾಂಧವ್ಯ ವ್ಯವಸ್ಥಾಪಕ ಶಿವಾನಂದ ಬ. ಪೋಷಟಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ, ಶ್ರೀ ಮಹಾಗಣಪತಿ ಸೇವಾ ಸಂಘದ ಖಜಾಂಚಿ ಹನುಮಂತಪ್ಪ ತಿಪ್ಪಾಪೂರ ಆಗಮಿಸುವರು.

ಮುದ್ದೇಬಿಹಾಳದ ಅಂಧ ಕಲಾವಿದ ಶಿವಪುತ್ರಪ್ಪ ಮೋರಟಗಿ, ವೀರೇಶ್ವರ ಪುಣ್ಯಾಶ್ರಮದ ಅಂಧರ ವಸತಿಯುತ ಸಂಗೀತ ಪಾಠಶಾಲೆಯ ತಬಲಾ ಶಿಕ್ಷಕ ಮುದ್ದಣ್ಣ ಬಿ. ಕೊನೆಹೊಲ, ಅಂಧ ಕಲಾವಿದ ಗುರುರಾಜ ಮಳಗಿ ಅವರಿಗೆ ಇದೇ ಸಂದರ್ಭದಲ್ಲಿ ಸನ್ಮಾನ ನಡೆಯಲಿದೆ. ಕಾರ್ಯಕ್ರಮಕ್ಕೆ ನೀರಲಗಿಯ ಮಲ್ಲಿಕಾರ್ಜುನ ಕುಂಬಾರ, ರಾಯಚೂರಿನ ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದ ಎಫ್‌ಡಿಎ ಚನ್ನಬಸವ ದಿದ್ದಿಗಿ, ಲಕ್ಷ್ಮೇಶ್ವರದ ಶ್ರೀ ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆಯ ಸಂಸ್ಥಾಪಕರಾದ ಮಂಜುನಾಥ ಈ. ಮುಳಗುಂದ, ಆದಾಯ ತೆರಿಗೆ ಇಲಾಖೆಯ ತೆರಿಗೆ ಸಹಾಯಕ ಸತೀಶ್ ರ‍್ಯಾವಣಕಿ, ಪುತ್ತೂರಿನ ಹೆಚ್ಚುವರಿ ನ್ಯಾಯಾಲಯದ ಎಫ್‌ಡಿಎ ರಾಮಕುಮಾರ ತಳವಾರ, ಮಂತ್ರಾಲಯದ ಪೂಜಿತಾ ಫ್ಯಾನ್ಸಿ ಸ್ಟೋರ್‌ನ ಗವಿಸಿದ್ದಯ್ಯ ಹಿರೇಮಠ ಅವರು ನೆರವಾಗಿದ್ದಾರೆ ಎಂದು ಸೇವಾ ಸಮಿತಿ ಪ್ರಕಟಣೆ ತಿಳಿಸಿದೆ.

## ಅಡವಿಂದ್ರಸ್ವಾಮಿ ಮಠದಲ್ಲಿ ಶ್ರೀ ಅನ್ನಪೂರ್ಣೇಶ್ವರಿ ದೇವಿಯ ಕಾರ್ತಿಕೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿಯ ಮುಳುಗುಂದ ನಾಕಾ ಹತ್ತಿರ ಇರುವ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಿನಾಂಕ 21.11.2025 ಶುಕ್ರವಾರ ಸಾಯಂಕಾಲ 7ಕ್ಕೆ ಶ್ರೀಮಠದ ಆರಾಧ್ಯ ದೈವ ಶ್ರೀ ಅನ್ನಪೂರ್ಣೇಶ್ವರಿ ದೇವಿಯ ಕಾರ್ತಿಕೋತ್ಸವ ಕಾರ್ಯಕ್ರಮ ಸಡಗರ, ಸಂಭ್ರಮದಿಂದ ಜರುಗಲಿದೆ.

ಕಾರ್ತಿಕೋತ್ಸವ ಕಾರ್ಯಕ್ರಮದ ಸಾನ್ನಿಧ್ಯವನ್ನು ಶ್ರೀಮಠದ ಧರ್ಮದರ್ಶಿಗಳಾದ ವೇದಮೂರ್ತಿ ಮಹೇಶ್ವರ ಸ್ವಾಮಿಗಳು, ಹೊಸಳ್ಳಿ ಮಠ ಅವರು ವಹಿಸುವರು. ಅಧ್ಯಕ್ಷತೆಯನ್ನು ಶಿವಾನುಭವ ಸಮಿತಿಯ ಅಧ್ಯಕ್ಷರಾದ ಡಾ.ರಾಜೇಂದ್ರ ಎಸ್. ಗಡಾದ ಅವರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಈ ಸಲದ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷರಾದ ಸದಾಶಿವ ಮದರಿಮಠ ಹಾಗೂ ಮಹಿಳಾ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮದರಿಮಠ ಅವರು ಆಗಮಿಸಲಿದ್ದಾರೆ.

ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಶ್ರೀಮಠದ ಸದ್ಭಕ್ತರು ಶಿವಾನುಭವ ಸಮಿತಿ ಹಾಗೂ ಜಾತ್ರಾ ಮಹೋತ್ಸವ ಸಮಿತಿಯ ಎಲ್ಲ ಪದಾಧಿಕಾರಿಗಳು, ಸರ್ವ ಸದಸ್ಯರು ಪಾಲ್ಗೊಳ್ಳಬೇಕೆಂದು ಶಿವಾನುಭವ ಸಮಿತಿಯ ಕಾರ್ಯದರ್ಶಿಗಳಾದ ಪ್ರಭುಗೌಡ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸರ್ಕಾರವನ್ನು ಎಚ್ಚರಿಸುವ ನಿಟ್ಟಿನಲ್ಲಿ ನೀಡಿದ್ದ ಲಕ್ಷ್ಮೇಶ್ವರ ಬಂದ್ ಸಂಪೂರ್ಣ ಯಶಸ್ವಿ

# ಲಕ್ಷ್ಮೇಶ್ವರ ಬಂದ್‌ಗೆ ಅಭೂತಪೂರ್ವ ಬೆಂಬಲ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ಕಾರ ಬೆಂಬಲ ಬೆಲೆಯೋಜನೆಯಡಿ ಗೋವಿನಜೋಳ ಖರೀದಿಸಬೇಕು ಎಂಬ ದಿಟ್ಟ ನಿಲುವಿನೊಂದಿಗೆ ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಮತ್ತು ಎಲ್ಲ ಸಂಘಟನೆಗಳ ಸಹಯೋಗದಲ್ಲಿ ಗುರುವಾರ ನೀಡಿದ್ದ ಲಕ್ಷ್ಮೇಶ್ವರ ಬಂದ್ ಕರೆಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಯಿತು.

ನ.15ರಿಂದ ರೈತರು ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದು, ದಿನೇ ದಿನೇ ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಹೋರಾಟಕ್ಕೆ ಸರ್ಕಾರದಿಂದ ಸ್ಪಷ್ಟ, ಸಮಾಧಾನಕರ ಉತ್ತರ ಸಿಗದಿರುವ ಕಾರಣ, ಸರ್ಕಾರವನ್ನು ಎಚ್ಚರಿಸುವ ನಿಟ್ಟಿನಲ್ಲಿ ನೀಡಿದ್ದ ಬಂದ್ ಕರೆ ಸಂಪೂರ್ಣ ಯಶಸ್ವಿಯಾಯಿತು.



ಬಂದ್ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತಾ ದೃಷ್ಟಿಯಿಂದ ಜಿಲ್ಲಾಡಳಿತ ಅಂಗನವಾಡಿ, ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಿತ್ತು. ರೈತ ಸಂಘಟನೆಗಳ ಒಕ್ಕೂಟ ಕರೆನೀಡಿದ್ದ ಬಂದ್‌ಗೆ ಅನೇಕ ಮಠಾಧೀಶರು, ಕನ್ನಡಪರ ಸಂಘಟನೆಗಳು, ಬಜಾರ ವ್ಯಾಪಾರಸ್ಥರ ಸಂಘ, ಬೀದಿ ಬದಿ ವ್ಯಾಪಾರಸ್ಥರ ಸಂಘ, ವಿದ್ಯಾರ್ಥಿ ಸಂಘಟನೆಗಳು, ಶ್ರೀರಾಮ ಸೇನೆ, ವಕೀಲರ ಸಂಘ, ಮೆಕಾನಿಕ್ ಸಂಘ, ಮಾಜಿ ಸೈನಿಕರ ಸಂಘ, ಔಷಧ ವ್ಯಾಪಾರಸ್ಥರ ಸಂಘ, ವೈದ್ಯರ ಸಂಘ, ಅಂಜುಮನ್ ಕಮಿಟಿ ಮುಂತಾದ ಸಂಘಟನೆಗಳು ಸ್ವಯಂ ಪ್ರೇರಿತ ಬೆಂಬಲ ವ್ಯಕ್ತಪಡಿಸಿ ಪಾಲ್ಗೊಂಡಿದ್ದರಿಂದ ಬಂದ್ ಸಂಪೂರ್ಣ ಯಶಸ್ವಿಯಾಯಿತು.

ಬೆಳಿಗ್ಗೆಯಿಂದಲೇ ಬಸ್ ಸಂಚಾರ ಸಂಪೂರ್ಣ ಬಂದ್ ಆಗಿತ್ತು. ಅಮವಾಸ್ಯೆ ಇದ್ದರೂ ಬಹುತೇಕ ಎಲ್ಲ ಅಂಗಡಿ ಮುಂಗಟ್ಟುಗಳು, ಹೋಟೆಲ್, ಬೀದಿ ಬದಿ ವ್ಯಾಪಾರಸ್ಥರು, ಎಪಿಎಂಸಿ, ಬಜಾರ ವ್ಯಾಪಾರಸ್ಥರು ಬೆಂಬಲ ಸೂಚಿಸಿದ್ದರಿಂದ ಎಲ್ಲ ವ್ಯಾಪಾರ ವಹಿವಾಟು ಸ್ಥಗಿತಗೊಂಡು ಇಡೀ ದಿನ ಬಜಾರ್ ಬಿಕೋ ಎನ್ನುವಂತಿತ್ತು. ತಹಸೀಲ್ದಾರ ರಾಘವೇಂದ್ರ ರಾವ್, ಡಿವೈಎಸ್ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ ಪಟ್ಟಣದಾದ್ಯಂತ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಹೋರಾಟದ ನೇತೃತ್ವ ವಹಿಸಿದ್ದ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ರವಿಕಾಂತ ಅಂಗಡಿ, ಮಹೇಶ ಹೊಗೆಸೊಪ್ಪಿನ, ಶರಣು ಗೋಡಿ, ಪೂರ್ಣಾಜಿ ಖರಾಟೆ, ಬಸಣ್ಣ ಬೆಂಡಿಗೇರಿ ಸೇರಿ ಸಾವಿರಾರು ಜನರು ಹೋರಾಟದಲ್ಲಿ ಪಾಲ್ಗೊಂಡಿದ್ದರು.

### ಬೃಹತ್ ಪ್ರತಿಭಟನಾ ಮೆರವಣಿಗೆ

ಪಟ್ಟಣದ ಪೇಟೆ ಆಂಜನೇಯ ದೇವಸ್ಥಾನದಿಂದ ರೈತರ ಬೃಹತ್ ಪ್ರತಿಭಟನಾ ರ‍್ಯಾಲಿ ನಡೆಯಿತು. ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ರೈತರು ಹಲಗೆ, ಭಜನೆ, ಎತ್ತು, ಚಕ್ಕಡಿ ಸಮೇತರಾಗಿ ಸರಕಾರ ನಿರ್ಲಕ್ಷ್ಯ ಧೋರಣೆಯ ವಿರುದ್ಧ ಘೋಷಣೆ ಕೂಗುತ್ತಾ ಶಿಗ್ಲಿ ನಾಕಾ ಬಳಿ ಸಂಗೊಳ್ಳಿ ರಾಯಣ್ಣ ವೃತ್ತದವರೆಗೂ ಸಾಗಿದರು. ಈ ವೇಳೆ ಪ್ರತಿಭಟನಾಕಾರರು ಸರಕಾರವು ತನ್ನ ಸ್ಪಷ್ಟ ನಿರ್ಧಾರ ಘೋಷಣೆ ಮಾಡದಿರುವದಕ್ಕೆ ಅರೆಬೆತ್ತಲೆಯಾಗಿ ಮೆರವಣಿಗೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು. ಹೂವಿನಶಿಗ್ಲಿ, ಕುಂದಗೋಳ, ಅತ್ತಿಮತ್ತೂರ, ಜಮಖಂಡಿ, ಮಳೆಮಲ್ಲಿಕಾರ್ಜುನ ಶ್ರೀಗಳು ಹೋರಾಟದಲ್ಲಿ ಪಾಲ್ಗೊಂಡಿದ್ದರು.

### ಉಪವಾಸ ಸತ್ಯಾಗ್ರಹ ಕೈಗೊಂಡಿದ್ದ ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು ತೀವ್ರ ಅಸ್ವಸ್ಥ

# ನಿತ್ರಾಣಗೊಂಡ ಶ್ರೀಗಳು ಜಿಲ್ಲಾಸ್ಪತ್ರೆಗೆ ದಾಖಲು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರದಲ್ಲಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿ ಉಪವಾಸ ಸತ್ಯಾಗ್ರಹ ನಿರತರಾಗಿದ್ದ ತಾಲೂಕಿನ ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು ತೀವ್ರ ಅಸ್ವಸ್ಥಗೊಂಡು ಗದಗ ಜಿಲ್ಲಾಸ್ಪತ್ರೆಗೆ ದಾಖಲಾದ ಘಟನೆ ಜರುಗಿದೆ.

ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಗಳು ಪ್ರಾರಂಭವಾಗಬೇಕೆಂಬ ಬೇಡಿಕೆಯೊಂದಿಗೆ ಲಕ್ಷ್ಮೇಶ್ವರಲ್ಲಿ ರೈತ ಸಂಘಟನೆಗಳು ನಡೆಸುತ್ತಿರುವ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹದಲ್ಲಿ ಕಳೆದ 4 ದಿನಗಳಿಂದ ಹನಿ ನೀರು, ಅನ್ನ, ಔಷಧವನ್ನೂ ಸೇವಿಸದೇ ಸಲ್ಲೇಖನ ವ್ರತದೊಂದಿಗೆ ರೈತರ ಹೋರಾಟಕ್ಕೆ ಶ್ರೀಗಳು ಬಲ ತುಂಬಿದ್ದರು.



ಶ್ರೀಗಳ ಕಠಿಣ ಹೋರಾಟಕ್ಕೆ ಎಚ್ಚೆತ್ತ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ, ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿ, ಮಾಜಿ ಶಾಸಕರು ಸೇರಿ ಅನೇಕ ಮುಖಂಡರು ಕಠಿಣ ಉಪವಾಸ ವ್ರತ ಕೈಬಿಡುವಂತೆ ಮಾಡಿಕೊಂಡ ಮನವಿಯನ್ನು ತಿರಸ್ಕರಿಸಿದ್ದ ಶ್ರೀಗಳು ಹೋರಾಟದ ದಿಕ್ಕನ್ನೇ ಬದಲಿಸಿದ್ದರು.

ದಿನೇ ದಿನೇ ಆರೋಗ್ಯದಲ್ಲಿ ಏರುಪೇರಾಗಿ ಸಕ್ಕರೆ ಪ್ರಮಾಣ, ರಕ್ತದೊತ್ತಡ ಕಡಿಮೆಯಾಗುತ್ತಿತ್ತು. ಅಲ್ಲದೆ ಬೆನ್ನು, ಕಾಲು ನೋವುಗಳು ಬಾಧಿಸುತ್ತಿದ್ದರೂ ರೈತರ ಸಲುವಾಗಿ ಪ್ರಾಣ ನೀಡುತ್ತೇನೆ ಹೊರತು ನ್ಯಾಯ ಸಿಗುವವರೆಗೂ ಜಾಗೆ ಬಿಟ್ಟು ಕದಲುವುದಿಲ್ಲ ಎಂದು ಪಟ್ಟು ಹಿಡಿದಿದ್ದರು.

ಆರೋಗ್ಯ ಇಲಾಖೆ ವತಿಯಿಂದ ಕಳೆದ 2-3 ದಿನಗಳಿಂದ ಗಂಟೆಗೊಂದು ಬಾರಿ ಸಕ್ಕರೆ ಪ್ರಮಾಣ, ರಕ್ತದೊತ್ತಡ ಪರೀಕ್ಷೆ ಮಾಡಲು ಸಮುದಾಯ ಆರೋಗ್ಯ ಕೇಂದ್ರದಿಂದ ಸಿಬ್ಬಂದಿಗಳನ್ನು ನೇಮಿಸಲಾಗಿತ್ತು. ಗುರುವಾರ ಲಕ್ಷ್ಮೇಶ್ವರ ಬಂದ್ ಕರೆ ಹಿನ್ನೆಲೆಯಲ್ಲಿ ಆರೋಗ್ಯದೊಂದಿಗೆ ಒತ್ತಡದ ಕಾರಣದಿಂದ ಕುಗ್ಗಿದ್ದರು. ಪ್ರತಿಭಟನಾ ಮೆರವಣಿಗೆ ವೇದಿಕೆ ಏರುತ್ತಿದ್ದಂತೆ ಏಕಾಏಕಿ ಅಸ್ವಸ್ಥಗೊಂಡರು. ಕೂಡಲೇ ತಾಲೂಕು ಆಸ್ಪತ್ರೆ ವೈದ್ಯಾಧಿಕಾರಿಗಳಿಂದ ಶ್ರೀಗಳ ತಪಾಸಣೆ ಮಾಡಲಾಗಿ, ಬಿಪಿ, ಶುಗರ್ ಮಟ್ಟ ಕಡಿಮೆಯಾಗಿ, ಪಲ್ಸ್ ರೇಟ್ ಜಾಸ್ತಿಯಾಗಿ ಅರೆ ಪ್ರಜ್ಞಾವಸ್ಥೆಗೆ ತಲುಪಿದ್ದರಿಂದ ಕೂಡಲೇ ಹೆಚ್ಚಿನ ಚಿಕಿತ್ಸೆಗೆ ಗದಗ ಜಿಲ್ಲಾಸ್ಪತ್ರೆಗೆ ಕಳುಹಿಸಿಕೊಡಲಾಯಿತು.

ಶ್ರೀಗಳು ರೈತರ ಪರವಾಗಿ ಹೋರಾಟದಲ್ಲಿ ಪಾಲ್ಗೊಂಡು ನಿತ್ರಾಣಗೊಂಡಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ, ಯಾವುದೇ ತೊಂದರೆ ಇಲ್ಲ. ಭಕ್ತರು ಆತಂಕಕ್ಕೆ ಒಳಗಾಗುವದು ಬೇಡ ಶ್ರೀಗಳಿಗೆ ಹೆಚ್ಚಿನ ಚಿಕಿತ್ಸೆ ಮತ್ತು ವಿಶ್ರಾಂತಿಯ ಅನಿವಾರ್ಯತೆಯಿದೆ. ಅವರು ಕೂಡಲೇ ಆರೋಗ್ಯ ಸುಧಾರಿಸಿ ಹೋರಾಟಕ್ಕೆ ಹೆಚ್ಚಿನ ಶಕ್ತಿ ತುಂಬಲಿ ಎಂದು ಪ್ರಾರ್ಥಿಸುವದಾಗಿ ಮಂಜುನಾಥ ಮಾಗಡಿ ತಿಳಿಸಿದರು.

ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ಅವರು ಶ್ರೀಗಳ ಆರೋಗ್ಯದ ಮೇಲೆ ಹೆಚ್ಚಿನ ನಿಗಾ ವಹಿಸಬೇಕೆಂದು ಜಿಲ್ಲಾಸ್ಪತ್ರೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಅವರಿಗೆ ಸೂಚಿಸಿದರು.

# ಸರ್ಕಾರ ರೈತರ ಬೇಡಿಕೆ ಈಡೇರಿಸಲಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೆಕ್ಕೆಜೋಳದ ಬೆಲೆ ಸಂಪೂರ್ಣ ಕುಸಿದಿದ್ದು, ನಮ್ಮ ಭಾಗದ ರೈತರು ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಖರೀದಿಸಬೇಕು ಎಂದು ದೊಡ್ಡಮಟ್ಟದ ಹೋರಾಟ ಮಾಡುತ್ತಿದ್ದಾರೆ. ಈ ನಿಟ್ಟನಲ್ಲಿ ಸರ್ಕಾರ ಕೂಡಲೇ ರೈತರ ಬೇಡಿಕೆ ಈಡೇರಿಸುವ ನಿಟ್ಟನಲ್ಲಿ ನಿರ್ಧಾರ ಕೈಗೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಗುರುವಾರ ಬೆಂಗಳೂರಿನಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ ಅವರನ್ನು ಭೇಟಿ ಮಾಡಿ ವಸ್ತುಸ್ಥಿತಿ ವಿವರಿಸಿದರು.

ಕೇಂದ್ರ ಸರ್ಕಾರ ಈಗಾಗಲೇ ಎಂಎಸ್‌ಪಿ 2400 ರೂ. ಘೋಷಣೆ ಮಾಡಿದೆ. ಆದರೆ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ 1600 ರೂ ಬೆಲೆಯಿದೆ. ಈ ಬೆಲೆಗೆ ಮಾರಾಟ ಮಾಡಿದರೆ ರೈತರು ನಷ್ಟಕ್ಕೊಳಗಾಗುತ್ತಾರೆ. ಮೊದಲೇ ಮುಂಗಾರು ಕೈಕೊಟ್ಟದೆ. ಬೆಳೆವಿಮೆ ಬೆಳೆಹಾನಿ ಪರಿಹಾರವೂ ಬಂದಿಲ್ಲ. ಆದ್ದರಿಂದ ರಾಜ್ಯ ಸರ್ಕಾರ ಬೆಂಬಲ ಬೆಲೆಗೆ ಇನ್ನೂ ಪ್ರತಿ ಕ್ವಿಂಟಾಲ್‌ಗೆ 500 ರೂ ಸೇರಿಸಿ 3000 ರೂ.ನಂತೆ ಖರೀಸಬೇಕು. ಇದನ್ನು ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಆಗ್ರಹಿಸುತ್ತಿದ್ದಾರೆ.

ಕೂಡಲೇ ಸರ್ಕಾರ ರೈತಪರ ನಿರ್ಧಾರ ಕೈಗೊಂಡು ಆದೇಶಿಸಬೇಕು ಎಂದು ಮನವಿ ಮಾಡಿದರು. ಈ ವೇಳೆ ರೈತ ಮುಖಂಡರು ಇದ್ದರು.

### ದೇಶದಲ್ಲೇ 4ನೇ ಸ್ಥಾನಕ್ಕೆ ಏರಿದ ಗದಗ ಜಿಲ್ಲೆ । 25 ಲಕ್ಷ ರೂ. ನಗದು ಬಹುಮಾನಕ್ಕೆ ಭಾಜನ

# ಜಲ ಸಂರಕ್ಷಣೆಯಲ್ಲಿ ಗದಗ ರಾಜ್ಯಕ್ಕೆ ಪ್ರಥಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಲಶಕ್ತಿ ಅಭಿಯಾನದ ಮಹತ್ವದ ಭಾಗವಾಗಿರುವ 'ಜಲಸಂಚಾಯಿ ಜನಭಾಗಿದಾರಿ 1.0' ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯು ಐತಿಹಾಸಿಕ ಸಾಧನೆ ಮಾಡುವ ಮೂಲಕ ರಾಜ್ಯಕ್ಕೆ ಕೀರ್ತಿ ತಂದಿದೆ. ಜಲ ಸಂರಕ್ಷಣೆ ಕಾಮಗಾರಿಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆಯು ಕರ್ನಾಟಕದಲ್ಲಿ ಪ್ರಥಮ ಸ್ಥಾನ ಗಳಿಸಿದ್ದು, ದೇಶದ 780 ಜಿಲ್ಲೆಗಳಲ್ಲಿ (ಝೋನ್ 3, ಕೆಟಗರಿ 3ರಲ್ಲಿ) ನಾಲ್ಕನೇ ಸ್ಥಾನ ಪಡೆಯುವ ಮೂಲಕ 25 ಲಕ್ಷ ರೂಪಾಯಿಗಳ ನಗದು ಬಹುಮಾನಕ್ಕೆ ಭಾಜನವಾಗಿದೆ.

'ಪ್ರತಿ ಹನಿ ನೀರನ್ನು ಸಂರಕ್ಷಿಸಿ' ಎಂಬ ಧ್ಯೇಯದೊಂದಿಗೆ ಜಲಸಂಚಾಯಿ ಜನಭಾಗಿದಾರಿ 1.0 ಅಭಿಯಾನವನ್ನು ಪ್ರಾರಂಭಿಸಲಾಗಿತ್ತು. ಮಳೆ ನೀರನ್ನು ಸಂಗ್ರಹಿಸುವುದು, ಜಲ ಸಂರಕ್ಷಣೆಯ ಸಂಸ್ಕೃತಿಯನ್ನು



ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವ ಉದ್ದೇಶದಿಂದ ಹಲವು ಪರಿಸರ ಸ್ನೇಹಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ. ಕೇಂದ್ರ ಅಧ್ಯಯನ ತಂಡ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದೆ. ಪ್ರಥಮ ಸ್ಥಾನ ದೊರೆತಿರುವುದು ನಮಗೆ ಮತ್ತಷ್ಟು ಕ್ರಿಯಾತ್ಮಕ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಪ್ರೋತ್ಸಾಹಕವಾಗಿದೆ.

**- ಸಿ.ಆರ್. ಮುಂಡರಗಿ.**
ಉಪಕಾರ್ಯದರ್ಶಿ, ಜಿ.ಪಂ-ಗದಗ.

ಬೆಳೆಸುವುದು, ನೀರಿನ ಗುಣಮಟ್ಟವನ್ನು ಸುಧಾರಿಸುವುದು, ನೀರಿನ ಕೊರತೆಯ ಸವಾಲಿಗೆ ಸಮುದಾಯದ

▸▸3ನೇ ಪುಟಕ್ಕೆ

ಜಲಸಂಚಾಯಿ ಜನಭಾಗಿದಾರಿ ಅಭಿಯಾನದಲ್ಲಿ ಕರ್ನಾಟಕದಲ್ಲೇ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿರುವುದು ಸಂತಸ ತಂದಿದೆ. ಅಂತರ್ಜಲ ಮಟ್ಟ ಹೆಚ್ಚಳ ಮತ್ತು ಪರಿಸರ ಸಂರಕ್ಷಣೆ ಕುರಿತು ಜಿಲ್ಲೆಯ ಅಧಿಕಾರಿಗಳು ಶ್ರಮವಹಿಸಿ ಹಲವು ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುವುದು ಪ್ರಶಂಸನೀಯ. ಬರುವ ಅನುದಾನವನ್ನು ಅಭಿಯಾನದ ಉದ್ದೇಶ ಈಡೇರಿಕೆಗೆ ಬಳಸಿಕೊಳ್ಳಲು ಶ್ರಮಿಸಲಾಗುವುದು.

**- ಶ್ರೀಧರ ಸಿ.ಎನ್.**
ಜಿಲ್ಲಾಧಿಕಾರಿಗಳು, ಗದಗ.

ಜಿಲ್ಲೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಅತೀ ಹೆಚ್ಚು ಕಾಮಗಾರಿಗಳನ್ನು ಜಿಲ್ಲೆಯಲ್ಲಿ ಅನುಷ್ಠಾನಿಸಿರುವುದರಿಂದಲೇ ಈ ಪ್ರಶಸ್ತಿ ಬಂದಿದೆ. ಇದಕ್ಕೆ ಪೂರಕವಾಗಿ ಇನ್ನಷ್ಟು ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಮನರೇಗಾ ಯೋಜನೆಯಡಿಯಲ್ಲಿ ಕ್ರಿಯಾಯೋಜನೆ ತಯಾರಿಸಿ, ಅನುಮೋದನೆ ಪಡೆದು ಹೆಚ್ಚಿನ ಕ್ರಿಯಾತ್ಮಕ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಮೇಲಾಧಿಕಾರಿಗಳ ಸೂಚನೆಯಂತೆ ಕ್ರಮವಹಿಸಲಾಗುವುದು.

**- ಕಿರಣಕುಮಾರ್ ಎಸ್.ಹೆಚ್.**
ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ, ಮನರೇಗಾ ವಿಭಾಗ, ಜಿ.ಪಂ ಗದಗ.

## 2025-26ನೇ ಸಾಲಿನ ವಿಶೇಷ ಅಗತ್ಯತೆಯುಳ್ಳ ಮಕ್ಕಳ ವೈದ್ಯಕೀಯ ಮೌಲ್ಯಾಂಕನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 6 ಬ್ಲಾಕ್‌ಗಳ ಎಲ್ಲ ವಲಯದ ಸರ್ಕಾರಿ/ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ 1ರಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಎಸ್.ಎಸ್.ಎ ಹಾಗೂ ಆರ್.ಎಮ್.ಎಸ್.ಎ ಯೋಜನೆಯಡಿಯಲ್ಲಿ 2025-26ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಉಚಿತ ವೈದ್ಯಕೀಯ ಮೌಲ್ಯಾಂಕನ ಶಿಬಿರವನ್ನು ನ. 29ರಿಂದ ಡಿ.5ರವರೆಗೆ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 4ರವರೆಗೆ ಆಯೋಜನೆ ಮಾಡಲಾಗಿದ್ದು, ಸದರಿ ಮೌಲ್ಯಾಂಕನ ಶಿಬಿರಕ್ಕೆ ಈ ಕೆಳಗಿನ ದಾಖಲೆಗಳೊಂದಿಗೆ ಮಕ್ಕಳನ್ನು ಹಾಜರುಪಡಿಸಲು ಆದೇಶಿಸಿದೆ.

ಶಿಬಿರಕ್ಕೆ ಬರುವಾಗ ವಿದ್ಯಾರ್ಥಿಗಳು ಈ ಕೆಳಗಿನ ದಾಖಲೆಗಳ 2 ಝೆರಾಕ್ಸ ಪ್ರತಿಗಳನ್ನು ಕಡ್ಡಾಯವಾಗಿ ತರುವುದು: ಮಗುವಿನ ಆಧಾರ್ ಕಾರ್ಡ್, ಮಗುವಿನ ಎರಡು ಭಾವಚಿತ್ರ, ಆದಾಯ ಪ್ರಮಾಣಪತ್ರ, ರೇಶನ್ ಕಾರ್ಡ್, ವೈದ್ಯಕೀಯ ಪ್ರಮಾಣ ಪತ್ರ (ಯು.ಡಿ.ಐ.ಡಿ. ಕಾರ್ಡ್), ಬ್ಯಾಂಕ್ ಪಾಸ್‌ಬುಕ್ ಕಡ್ಡಾಯವಾಗಿರುತ್ತದೆ. ಚಲನಾ ದೋಷ, ಸೆರೆಬ್ರಲ್ ಪಾಲ್ಸಿ ಪೂರ್ಣದೃಷ್ಟಿ ದೋಷ, ಬೌದ್ಧಿಕ ಅಸಮರ್ಥತೆ, ಶ್ರವಣ ದ್ದೋಷ, ಬಹು ವಿಕಲತೆ ಇರುವ ವಿದ್ಯಾರ್ಥಿಗಳು ಭಾಗವಹಿಸಬಹುದು. ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರದಲ್ಲಿ ಶಿಬಿರಗಳು ನಡೆಯಲಿವೆ. ಗದಗ ಶಹರದಲ್ಲಿ ನ.29, ಆಯಾ ಬ್ಲಾಕ್ ನ ಬಿ.ಆರ್.ಸಿ ಕೇಂದ್ರ ಗದಗ ಗ್ರಾಮೀಣ, ಡಿ. 1, ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರ ಮುಂಡರಗಿ, ಡಿ. 2 ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರ ನರಗುಂದ, ಡಿ. 3, ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರ ರೋಣ, ಡಿ. 4, ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರ ಶಿರಹಟ್ಟಿ, ಡಿ. 5, ಆಯಾ ಬ್ಲಾಕ್‌ನ ಬಿ.ಆರ್.ಸಿ ಕೇಂದ್ರಗಳಲ್ಲಿ ಆಯಾ ದಿನಾಂಕಗಳಂದು ನಡೆಯಲಿವೆ ಎಂದು ಉಪ ನಿರ್ದೇಶಕರು ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ-ಗದಗ ಇವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಡಿ.ವಾಯ್.ಪಿ.ಸಿ.ಓ ರವಿಪ್ರಕಾಶ ಎಸ್.ಎನ್-ಮೊ:9481173302, ಎ.ಪಿ.ಸಿ.ಓ ಶಿವಕುಮಾರ ಕುರಿಯವ-ಮೊ:9916613815, ಬಿ.ಆಯ್.ಇ.ಆರ್.ಟಿ ಶಶಿಧರ ವಿ.ಚಳಗೇರಿ-ಮೊ:9972620132 ಸಂಪರ್ಕಿಸಲು ಕೋರಿದೆ.

### ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯಿಂದ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ

# ಶಿಕ್ಷಕ ಬಸಪ್ಪ ಎನ್.ಉಕ್ಕುಂದರಿಗೆ ಗೌರವ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಸದಾ ಕಾಲ ತಮ್ಮ ಪ್ರಾಮಾಣಿಕ ಕಲಿಕೆಯ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸುತ್ತಿರುವ ಕದಾಂಪುರ ಗ್ರಾಮದ ಪ್ರೌಢಶಾಲೆಯ ಗಣಿತ ವಿಷಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಬಸಪ್ಪ ಎನ್.ಉಕ್ಕುಂದ ಅವರು ರೋಣದ ಹೊಳೆಆಲೂರಿನ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ನ.23ರಂದು ಹಮ್ಮಿಕೊಂಡಿರುವ 'ಗದಗ ಜಿಲ್ಲಾ ಕನ್ನಡ ನುಡಿ ಸಮ್ಮೇಳನ' ಕಾರ್ಯಕ್ರಮದಲ್ಲಿ ಕೊಡಮಾಡುವ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ.

> ವಿದ್ಯಾರ್ಥಿಗಳ ಕಲಿಕೆಗಾಗಿ ನಿರಂತರವಾಗಿ ತಮ್ಮನ್ನು ತೊಡಗಿಸಿಕೊಂಡು ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕ ಬಸಪ್ಪ ಉಕ್ಕುಂದ ಅವರನ್ನು ಗುರುತಿಸಿ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಪ್ರಶಂಸನೀಯ.
>
> **– ಬಸಪ್ಪ ಚನ್ನಬಸಪ್ಪ ನರೇಗಲ್ಲ.**
> ಎಸ್‌ಡಿಎಮ್‌ಸಿ ಅಧ್ಯಕ್ಷ, ಕದಾಂಪುರ.

> ಪ್ರತಿಯೊಂದು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಗಣಿತ ಸೇರಿದಂತೆ ವಿವಿಧ ವಿಷಯಗಳು ಪ್ರಮುಖ ಪಾತ್ರ ವಹಿಸಲಿದ್ದು, ವಿದ್ಯಾರ್ಥಿಗಳು ಈಗಿನಿಂದಲೇ ಗಣಿತ ವಿಷಯದಲ್ಲಿ ಪ್ರಾವೀಣ್ಯತೆ ಹೊಂದಲು ಮುಂದಾಗಬೇಕು.
>
> **– ಬಸಪ್ಪ ಎನ್.ಉಕ್ಕುಂದ.**
> ಪ್ರಶಸ್ತಿ ಪುರಸ್ಕೃತ ಶಿಕ್ಷಕ.

ನಾಗಪ್ಪ-ಲಲಿತಮ್ಮ ಅವರು ಬಸಪ್ಪ ಉಕ್ಕುಂದ ಅವರ ತಂದೆ-ತಾಯಿಗಳು. ಯಲ್ಲಾಪುರದಲ್ಲಿ ಪ್ರಾಥಮಿಕ ಶಿಕ್ಷಣ, ದೇವರಗುಡ್ಡದ ಶ್ರೀ ಮಾಂತೇಶ ಪ್ರೌಢಶಾಲೆಯಲ್ಲಿ ಪ್ರೌಢ ಶಿಕ್ಷಣ ಮುಗಿಸಿದರು. ಪಿಯುಸಿ ಬಳಿಕ ಆರ್‌ಟಿಎಸ್ ಮಹಾವಿದ್ಯಾಲಯ ಕಾಲೇಜಿನಲ್ಲಿ ಬಿಎಸ್‌ಸಿ, ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಬಿ.ಇಡಿ ಶಿಕ್ಷಣ ಪಡೆದರು. ಎಂಎಸ್‌ಸಿ ದೂರ ಶಿಕ್ಷಣದಲ್ಲಿ ಪಡೆದುಕೊಂಡಿದ್ದಾರೆ.

ವೀಣಾ ಅವರನ್ನು ಕೈ ಹಿಡಿದರು. 2010ರಲ್ಲಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಗಡಿ ಭಾಗವಾಗಿದ್ದ ದಳಸನೂರ ಗ್ರಾಮದಲ್ಲಿ ವೃತ್ತಿ ಜೀವನ ಪ್ರಾರಂಭಿಸಿ, 6 ವರ್ಷಗಳ ಕಾಲ ಸೇವೆ ಸಲ್ಲಿಸಿ ನಂತರ ಮುಂಡರಗಿ ತಾಲೂಕಿನ ಕದಾಂಪುರ ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸೃಜನಶೀಲತೆಯಿಂದ ಗಣಿತದ ಮೂಲಭೂತ ಜ್ಞಾನವನ್ನು ಬಲಗೊಳಿಸಿ, ತಾರ್ಕಿಕ ಚಿಂತನೆಗೆ ಉತ್ತೇಜನ ನೀಡಿ, ಸಮಸ್ಯೆ ಪರಿಹಾರದ ಸಾಮರ್ಥ್ಯವನ್ನು ವಿದ್ಯಾರ್ಥಿಗಳಲ್ಲಿ ರೂಪಿಸುವುದರ ಮೂಲಕ ವಿದ್ಯಾರ್ಥಿಗಳ ಮೆಚ್ಚುಗೆಯ ಶಿಕ್ಷಕರಾಗಿದ್ದಾರೆ. ಕರ್ನಾಟಕ ರಾಜ್ಯ ಗಣಿತ ವಿಷಯದ ಸಂಚಾಲಕರಾಗಿ, ಗದುಗಿನಲ್ಲಿ ನಡೆದ ಜಿಲ್ಲಾ ಮಟ್ಟದ ಮಕ್ಕಳ ಗಣಿತ, ಗಣಿತ ವಿಷಯದ ಮಾರ್ಗದರ್ಶಕರಾಗಿ, ಸಂಪನ್ಮೂಲ ವ್ಯಕ್ತಿಯಾಗಿ ಹಲವು ಗಣಿತ ವಿಷಯ ಕಾರ್ಯಾಗಾರಗಳನ್ನು ನಡೆಸುವುದರ ಮೂಲಕ ಸೇವೆ ಸಲ್ಲಿಸಿದ ಇವರ ಕಾರ್ಯಕ್ಕೆ ಶಿಕ್ಷಕರು ಅಪಾರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



> ವಿದ್ಯಾರ್ಥಿಗಳ ಕಲಿಕೆಗಾಗಿ ನಿರಂತರ ಸೃಜನಾತ್ಮಕವಾದ ಕಾರ್ಯ, ಶಿಸ್ತು, ಸೇವೆ, ವಿದ್ಯಾರ್ಥಿಗಳ ಜ್ಞಾನದ ಪ್ರಾವೀಣ್ಯತೆ ಹೆಚ್ಚಿಸಲು ಶ್ರಮಿಸುತ್ತಿರುವ ಶಿಕ್ಷಕ ಬಸಪ್ಪ ಉಕ್ಕುಂದ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ಒಲಿದುಬಂದಿರುವುದು ಸಂತೋಷ ತಂದಿದೆ.
>
> **– ಎ.ಎಲ್. ಬಿಜಾಪುರ.** ಮುಖ್ಯೋಪಾಧ್ಯಾಯ,
> ಸರ್ಕಾರಿ ಪ್ರೌಢಶಾಲೆ ಕದಾಂಪುರ.

ವಿದ್ಯಾರ್ಥಿಗಳ ಮೆಚ್ಚಿನ ಶಿಕ್ಷಕರಾದ ಬಸಪ್ಪ ಉಕ್ಕುಂದ ಅವರು ಗಣಿತ ಭಾಷೆಯ ಬೋಧನಾ ಕೌಶಲ್ಯದ ಮೂಲಕ ಗ್ರಾಮೀಣ ಮಕ್ಕಳ ಆಶಾಕಿರಣವಾಗಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿ ಹಲವು ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿದ್ದಾರೆ. ಗಣಿತ ಶಿಕ್ಷಣ ನೀಡುವುದರೊಂದಿಗೆ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ನಿರಂತರ ಶ್ರಮಿಸುತ್ತಿರುವ ಫಲವಾಗಿ ಸಾವಿರಾರು ವಿದ್ಯಾರ್ಥಿಗಳು ಉನ್ನತ ಹುದ್ದೆಯನ್ನು ಹೊಂದುವಂತೆ ಮಾಡುತ್ತಿರುವ ಶ್ರೇಯಸ್ಸು ಇವರದಾಗಿದೆ.

### ಕಳಕಾಪೂರ ಗ್ರಾಮದಲ್ಲಿ ಕನಕದಾಸರ ಜಯಂತಿ ಕಾರ್ಯಕ್ರಮ

# ಕನಕದಾಸರ ಚಿಂತನೆಗಳನ್ನು ಅಳವಡಿಸಿಕೊಳ್ಳಿ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾಮಾಜಿಕ ಅಸಮಾನತೆ ಮತ್ತು ಮೂಢನಂಬಿಕೆಯನ್ನು ಹೋಗಲಾಡಿಸಲು ಕನಕದಾಸರ ವೈಚಾರಿಕ ಹೋರಾಟ ಇಂದಿನ ಸಮಾಜಕ್ಕೆ ಮಾದರಿಯಾಗಿದೆ. ಯುವ ಸಮುದಾಯ ಕನಕದಾಸರ ಚಿಂತನೆಗಳನ್ನು ಅಳವಡಿಸಿಕೊಳ್ಳುವದು ಅಗತ್ಯವಾಗಿದೆ ಎಂದು ಧಾರವಾಡದ ಮುನ್ನೂರ್ ರೇವಣಸಿದ್ಧೇಶ್ವರ ಮಠದ ಪೂಜ್ಯ ಬಸವರಾಜ ದೇವರು ಹೇಳಿದರು.

ಸಮೀಪದ ಕಳಕಾಪೂರ ಗ್ರಾಮದಲ್ಲಿ ನಡೆದ 538ನೇ ಕನಕದಾಸರ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗ್ರಾಮದಲ್ಲಿ ಕನಕ ಭವನ ನಿರ್ಮಿಸಿ ನಿತ್ಯ ಕನಕದಾಸರ ಕೀರ್ತನೆ ಹಾಗೂ ಸಾಹಿತ್ಯ ಚಿಂತನೆ ಮಾಡುವ ಮೂಲಕ ಸಮಾಜದ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕು. ಕನಕದಾಸರ ವಿಚಾರಧಾರೆಯನ್ನು ಹಂಚಿ ಸಮಾಜವನ್ನು ವ್ಯಸನ ಮುಕ್ತಗೊಳಿಸಬೇಕು ಎಂದು ಕರೆ ನೀಡಿದರು.

ಧಾರವಾಡದ ವಿದ್ಯಾರಣ್ಯ ಪ್ರೌಢಶಾಲೆಯ ಕನ್ನಡ ಶಿಕ್ಷಕ ಬಸವರಾಜ ಪಾಟೀಲ ಉಪನ್ಯಾಸ ನೀಡಿ, ಕನಕದಾಸರ ತತ್ವಾದರ್ಶಗಳು ಇಂದಿನ ಸಮಾಜಕ್ಕೆ ದೀವಿಗೆಯಾಗಿವೆ. ತಾರತಮ್ಯ ಸರಿಪಡಿಸಿ ಸಾಮರಸ್ಯ ತರುವ ಅವರ ವಿಚಾರಗಳು ಬೆಲೆ ಬಾಳುವ ಮೌಲ್ಯಗಳಾಗಿವೆ ಎಂದು ಅಭಿಪ್ರಾಯಪಟ್ಟರು.

> ರೋಣದ ಕ್ಷೇತ್ರ ಸಂಪನ್ಮೂಲ ಕೇಂದ್ರದ ಅಧಿಕಾರಿ ಈಶ್ವರ ಕುರಿಯವರ ಮಾತನಾಡಿ, ಕನಕದಾಸರು ಸಾಮಾಜಿಕ ಮತ್ತು ವೈಚಾರಿಕ ಹೋರಾಟಗಾರರು. ಅವರ ಗಟ್ಟಿತನದ ಸಾಹಿತ್ಯ ಇಂದಿನ ಸಮಾಜ ಸುಧಾರಿಸಲು ಸಹಕಾರಿ. ಅವರ ಜೀವನದ ಹೋರಾಟ ನಮ್ಮೆಲ್ಲರಿಗೂ ಮಾರ್ಗದರ್ಶಿಯಾಗಲಿ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಗಜೇಂದ್ರಗಡ ಸರಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಪ್ರಾಚಾರ್ಯ ಬಸವಂತಪ್ಪ ಹೊಸಹಳ್ಳಿ ಹಾಲುಮತ ಧರ್ಮ, ಸಂಸ್ಕೃತಿ ಹಾಗೂ ಪರಂಪರೆ ಮತ್ತು ಡೊಳ್ಳು ಕುಣಿತದ ಇತಿಹಾಸದ ಬಗ್ಗೆ ವಿವರಣೆ ನೀಡಿದರು.

ಸಂಕನೂರಿನ ಧರ್ಮರಮಠದ ಅಭಿಮನ್ಯಪ್ಪಜ್ಜನವರು, ಹಿರೇನಸಿಬಿಯ ಧರ್ಮಾಧಿಕಾರಿ ಬಸಯ್ಯಜ್ಜನವರು ಆಶೀರ್ವಚನ ನೀಡಿದರು. ಇಟಗಿಯ ಧರ್ಮರಮಠದ ನಾಗಪ್ಪಜ್ಜ ಧರ್ಮರ ಅಧ್ಯಕ್ಷತೆ ವಹಿಸಿದ್ದರು.

ತಿಮ್ಮಾಪುರ ಪ್ರೌಢಶಾಲೆ ಶಿಕ್ಷಕ ಕೆ.ಎಸ್. ಬೆನಕನವಾರಿ, ಗ್ರಾಮದ ಮುಖಂಡರಾದ ಬನ್ನೆಪ್ಪ ಕಟ್ಟಿಮನಿ, ಯಲ್ಲಪ್ಪ ಕುರಿ, ಕಳಕನಗೌಡ ಗೌಡ್ರ, ಕಳಕಪ್ಪ ರಾಜೂರ, ಈರಪ್ಪ ಮಾಗಿ, ಅಶೋಕ ಶಿರಹಟ್ಟಿ, ಸಿದ್ರಾಮ ಕಟ್ಟಿಮನಿ, ಮುನಿಯಪ್ಪ ಮಾಗಿ, ಶರಣಪ್ಪ ಕಳಕಾಪೂರ, ಉಪಸ್ಥಿತರಿದ್ದರು. ಅಂದಪ್ಪ ಶಿರಹಟ್ಟಿ ಸ್ವಾಗತಿಸಿದರು. ಹೊನಕೇರಪ್ಪ ಕಟ್ಟಿಮನಿ ನಿರೂಪಿಸಿದರು. ಬಸುರಾಜ ಜಿಗಳೂರ ನಿರ್ವಹಿಸಿದರು. ಬಸವರಾಜ ಶಿರಹಟ್ಟಿ ವಂದಿಸಿದರು.

# ರಾಷ್ಟ್ರೀಯ ಅಪಸ್ಮಾರ ದಿನಾಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ವಿಭಾಗ, ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಂಡರಗಿಯ ತಾಲೂಕಾ ಆಸ್ಪತ್ರೆ ಸಭಾಭವನದಲ್ಲಿ ರಾಷ್ಟ್ರೀಯ ಅಪಸ್ಮಾರ ದಿನಾಚರಣೆ ಅಂಗವಾಗಿ ಕಾರ್ಯಕ್ರಮ ಜರುಗಿತು.

ಮುಂಡರಗಿ ತಾಲೂಕಾ ಆರೋಗ್ಯ ಅಧಿಕಾರಿ ಡಾ. ಲಕ್ಷ್ಮಣ ಪೂಜಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮೂರ್ಛೆ ರೋಗ/ಅಪಸ್ಮಾರ ಸಮಸ್ಯೆ ಹೆಚ್ಚಾಗುತ್ತಿದ್ದು, ಇದರಿಂದ ಕುಟುಂಬ-ಸಮಾಜ ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದೆ ಉಳಿಯುತ್ತಿದೆ. ಅಪಸ್ಮಾರದ ಲಕ್ಷಣಗಳನ್ನು ಬೇಗನೆ ಗುರುತಿಸಿ ಚಿಕಿತ್ಸೆ ಪಡೆಯುವಿಕೆ ಹಾಗೂ ತಡೆಗಟ್ಟುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು.

ಮುಂಡರಗಿ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳಾ ಸಜ್ಜನರ ಅಪಸ್ಮಾರ ರೋಗ ಲಕ್ಷಣಗಳು, ಅಪಸ್ಮಾರದ ಮುನ್ನೆಚ್ಚರಿಕೆ ಕ್ರಮದ ಬಗ್ಗೆ ತಿಳಿಸಿದರು. ಕಭಿ ಕಾರ್ಯಕ್ರಮದ ಜಿಲ್ಲಾ ಸಂಯೋಜಕರಾದ ಪ್ರವೀಣ ರೋಣದ ಅವರು ಕಭಿ ಕಾರ್ಯಕ್ರಮದ ಉದ್ದೇಶಗಳು ಮತ್ತು ಗುರಿಗಳ ಬಗ್ಗೆ ಜಾಗೃತಿ ಮೂಡಿಸಿದರು.

ಕಭಿ ಕಾರ್ಯಕ್ರಮದ ಡಾ. ಅಶ್ವಿನಿ ಎಮ್.ಕುರಿಯವರ ಮಾತನಾಡಿ, ಈ ಖಾಯಿಲೆಗೆ ಅನುಗುಣವಾಗಿ ದಿನನಿತ್ಯದ ಚಟುವಟಿಕೆಳನ್ನು ಮತ್ತು ವ್ಯಾಯಾಮಗಳನ್ನು ಮಾಡುವುದರ ಜೊತೆಗೆ ಚಿಕಿತ್ಸೆ ಮತ್ತು ದೈಹಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿದರು.

ರವಿ ನಂದ್ಯಾಳ ಸ್ವಾಗತಿಸಿದರು. ಮಂಜುಳಾ ಸಜ್ಜನರ ಕಾರ್ಯಕ್ರಮ ನಿರೂಪಿಸಿದರು. ರೇವಣಸಿದ್ಧಪ್ಪ ವಂದಿಸಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಡಾ. ನಿತಿನ ಸ್ವರೂಪ, ಡಾ. ರವಿ ಕಡಗಾವಿ, ಎನ್.ಸಿ.ಡಿ ಕಾರ್ಯಕ್ರಮ ಸಂಯೋಜಕರು, ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಯೋಜನೆಗಳ ಪೋಸ್ಟರ್ ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ ನಿಗಮದ ನಿರ್ದೇಶಕ ಪ್ರಶಾಂತರಾಜನ್ ಜತ್ತಣ್ಣ ಅವರು ಗದಗ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಕ್ರಿಶ್ಚಿಯನ್ ಸಮುದಾಯದ ಸಿಎಸ್‌ಐ ಚರ್ಚ್ ಗದಗ ಸಭಾ ಭವನದಲ್ಲಿ 2025-26ನೇ ಸಾಲಿನ ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ನಿಗಮದ ವಿವಿಧ ಯೋಜನೆಗಳ ಪೋಸ್ಟರ್ ಬಿಡುಗಡೆ ಹಾಗೂ ವಿವಿಧ ಯೋಜನೆಗಳ ಪ್ರಯೋಜನೆ ಪಡೆದುಕೊಳ್ಳಲು ಕ್ರಿಶ್ಚಿಯನ್ ಸಮುದಾಯದ ಫಲಾನುಭವಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಗದಗ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರಾದ ಸೈಯದ್ ಜೊಹೈಬುಲ್ಲಾಹ್, ಸಿಬ್ಬಂದಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕ್ರಿಶ್ಚಿಯನ್ ಸಮುದಾಯದ ಮುಖಂಡರಾದ ಜೊಸೇಫ್ ಜೋಶಿ, ಎಲಿಷ್ ಕುಮಾರ, ರಿಜನಾಲ್ಡ್ ಫೌಂಡ್, ಡೋರಿಟಾ ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಭೀಮಾ ಕೋರೆಗಾಂವ್ ಪ್ರಕರಣ : ಜ್ಯೋತಿ ಜಗ್ತಾಪ್‌ಗೆ ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭೀಮಾ ಕೋರೆಗಾಂವ್ ಹಿಂಸಾಚಾರ ಪ್ರಕರಣದ ಆರೋಪಿಗಳಲ್ಲಿ ಒಬ್ಬರಾದ ಜ್ಯೋತಿ ಜಗ್ತಾಪ್ ಅವರಿಗೆ ಸುಪ್ರೀಂ ಕೋರ್ಟ್ ಬುಧವಾರ (ನವೆಂಬರ್ 19) ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ಜಗ್ತಾಪ್ ಸುಮಾರು ಐದೂವರೆ ವರ್ಷಗಳಿಂದ ಬಂಧನದಲ್ಲಿದ್ದಾರೆ ಎಂಬುವುದನ್ನು ಗಮನಿಸಿದ ನ್ಯಾಯಮೂರ್ತಿಗಳಾದ ಎಂ.ಎಂ ಸುಂದ್ರೇಶ್ ಮತ್ತು ಸತೀಶ್ ಚಂದ್ರ ಶರ್ಮಾ ಅವರ ಪೀಠ ಜಾಮೀನು ನೀಡಿದೆ.

"ಅವರು (ಜಗ್ತಾಪ್) 5 ವರ್ಷ 6 ತಿಂಗಳು ಬಂಧನದಲ್ಲಿ ಕಳೆದಿದ್ದಾರೆ. ಕೋರಿಕೆಯಂತೆ ಪ್ರಕರಣವನ್ನು ಮುಂದೂಡಲಿ, ಆದರೆ ಜಾಮೀನು ಮಂಜೂರು ಮಾಡಲಿ" ಎಂದು ಜಗ್ತಾಪ್ ಪರ ಹಿರಿಯ ವಕೀಲೆ ಅಪರ್ಣಾ ಭಟ್ ನ್ಯಾಯಾಲಯಕ್ಕೆ ಮನವಿ ಮಾಡಿದ್ದರು.

ಮನವಿ ಪರಿಗಣಿಸಿದ ನ್ಯಾಯಾಲಯ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ಪ್ರಕರಣದ ಕಿರಿಯ ಆರೋಪಿಗಳಲ್ಲಿ ಒಬ್ಬರಾದ ಜಗ್ತಾಪ್ ಅವರನ್ನು ಸೆಪ್ಟೆಂಬರ್ 8, 2020ರಂದು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಬಂಧಿಸಿತ್ತು. ಅಕ್ಟೋಬರ್ 9, 2020ರಂದು ಅವರ ವಿರುದ್ಧ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಲಾಗಿದೆ.

ಜಗ್ತಾಪ್ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿಯಲ್ಲಿ ನಿಷೇಧಿತ ಸಂಘಟನೆಯಾದ ಕಬೀರ್ ಕಲಾ



ಮಂಚ್ (ಕೆಕೆಎಂ) ನ ಸದಸ್ಯರು ಎಂದು ಆರೋಪಿಸಲಾಗಿದೆ.

2002ರ ಗುಜರಾತ್ ಗಲಭೆಯ ನಂತರ, ಹಲವಾರು ಕಲಾವಿದರು, ಕವಿಗಳು, ಗಾಯಕರು ಮತ್ತು ಬುದ್ಧಿಜೀವಿಗಳು ಒಟ್ಟಾಗಿ ಸೇರಿಕೊಂಡು ರಚಿಸಿದ ಒಂದು ಸಾಂಸ್ಕೃತಿಕ ಗುಂಪಾಗಿದೆ ಕೆಕೆಎಂ. ಈ ಗುಂಪು ತಮ್ಮ ಸಂಗೀತ, ಕವಿತೆ, ನಾಟಕ ಮತ್ತು ಇತರ ಕಲಾರೂಪಗಳ ಮೂಲಕ ಸಾಮಾಜಿಕ ನ್ಯಾಯ, ಸಾಮರಸ್ಯ, ಜಾತ್ಯತೀತತೆ, ಮತ್ತು ಗಲಭೆಯ ಸಮಯದಲ್ಲಿ ನಡೆದ ಅತ್ಯಾಚಾರಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿತ್ತು.

ಕೆಕೆಎಂ ಮುಖ್ಯವಾಗಿ ದಲಿತ-ಬಹುಜನ ಸಮುದಾಯದ ಕಲಾವಿದರಿಂದ ರೂಪಿತವಾದ ಗುಂಪಾಗಿದ್ದು, ಡಾ. ಬಿ.ಆರ್ ಅಂಬೇಡ್ಕರ್ ಮತ್ತು ಸಂತ ಕಬೀರ್ ಅವರ ಆಶಯಗಳಿಂದ ಪ್ರೇರಿತವಾಗಿತ್ತು. ಗುಂಪಿನ ಸದಸ್ಯರು ಬೀದಿ ನಾಟಕ, ಪ್ರತಿಭಟನಾ ಗೀತೆಗಳು ಮತ್ತು ಕವಿತೆಗಳ ಮೂಲಕ ಜನರನ್ನು ಒಗ್ಗೂಡಿಸುತ್ತಿದ್ದರು.

## ಮಸೂದೆಗಳಿಗೆ ಸಹಿ ಹಾಕಲು ರಾಷ್ಟ್ರಪತಿ, ರಾಜ್ಯಪಾಲರಿಗೆ ಗಡುವು ವಿಧಿಸಲು ಸಾಧ್ಯವಿಲ್ಲ; ಸುಪ್ರೀಂಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂವಿಧಾನದ 143ನೇ ವಿಧಿಯ ಅಡಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಾಡಿರುವ ಉಲ್ಲೇಖಕ್ಕೆ ಉತ್ತರಿಸಿರುವ ಸುಪ್ರೀಂ ಕೋರ್ಟ್, "ಸಂವಿಧಾನದ 200/201ನೇ ವಿಧಿಗಳ ಅಡಿಯಲ್ಲಿ ಮಸೂದೆಗಳಿಗೆ ಒಪ್ಪಿಗೆ ನೀಡುವ ಕುರಿತು ರಾಷ್ಟ್ರಪತಿ ಮತ್ತು ರಾಜ್ಯಪಾಲರ ನಿರ್ಧಾರಗಳಿಗೆ ನ್ಯಾಯಾಲಯವು ಯಾವುದೇ ಸಮಯ ಮಿತಿಯನ್ನು ನಿಗದಿಪಡಿಸಲು ಸಾಧ್ಯವಿಲ್ಲ ಎಂದು ಮಂಗಳವಾರ (ನವೆಂಬರ್ 20) ಸ್ಪಷ್ಟಪಡಿಸಿದೆ.

ರಾಷ್ಟ್ರಪತಿ ಮತ್ತು ರಾಜ್ಯಪಾಲರು ಕಾಲಮಿತಿಯನ್ನು ಉಲ್ಲಂಘಿಸಿದರೆ, ನ್ಯಾಯಾಲಯಗಳು ಮಸೂದೆಗಳಿಗೆ 'ಪರಿಗಣಿತ ಒಪ್ಪಿಗೆ' (ತಾನಾಗಿಯೇ ಒಪ್ಪಿಗೆ) ಎಂದು ಘೋಷಿಸುವ ಪರಿಕಲ್ಪನೆಯು ಸಂವಿಧಾನದ ಆಶಯ ಮತ್ತು ಅಧಿಕಾರಗಳ ಪ್ರತ್ಯೇಕತೆಯ ಸಿದ್ಧಾಂತಕ್ಕೆ ವಿರುದ್ಧವಾಗಿದೆ. ಇದು ವಾಸ್ತವಿಕವಾಗಿ ರಾಜ್ಯಪಾಲರಿಗೆ ಮೀಸಲಾಗಿರುವ ಕಾರ್ಯಗಳನ್ನು ಆಕ್ರಮಿಸಿಕೊಳ್ಳುವುದಾಗಿ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ವಿಧಾನಸಭೆಂಯಲ್ಲಿ ಅಂಗೀಕೃತಗೊಂಡ ಮಸೂದೆಗೆ ಅಂಕಿತ ಹಾಕಲು ರಾಷ್ಟ್ರಪತಿ ಮತ್ತು ರಾಜ್ಯಪಾಲರಿಗೆ ನ್ಯಾಯಾಂಗ ಗಡುವೊಂದನ್ನು ವಿಧಿಸುವುದು, ಆ ಗಡುವು ಮೀರಿದ ನಂತರ 'ಅನುಮೋದನೆ ತಾನಾಗಿಯೇ ಸಿಕ್ಕಿತು' (deemed consent) ಎಂದು ಪರಿಗಣಿಸುವಂತೆ ಆದೇಶಿಸುವುದು ಸಂವಿಧಾನಾತ್ಮಕವಾಗಿ ತಪ್ಪು ಮತ್ತು ಅಸಾಧ್ಯ. ಏಕೆಂದರೆ, ಇಂತಹ ಆದೇಶದಿಂದ ನ್ಯಾಯಾಂಗವು ಕಾರ್ಯಾಂಗದ ಮೂಲಭೂತ ಕರ್ತವ್ಯವನ್ನೇ ಆಕ್ರಮಿಸಿಕೊಂಡಂತಾಗುತ್ತದೆ ಮತ್ತು ರಾಜ್ಯಪಾಲರು ಅಥವಾ ರಾಷ್ಟ್ರಪತಿಯ ಸ್ಥಾನವನ್ನು ಬದಲಾಯಿಸಿದಂತಾಗುತ್ತದೆ".

# 'ನಾಡದೇವಿಗೆ ನಮನ' ರಾಜ್ಯೋತ್ಸವ ಸಮಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆಯಾದ ಗದುಗಿನ ಕಲಾ ವಿಕಾಸ ಪರಿಷತ್‌ನ ರಜತ ಸಂಭ್ರಮವನ್ನು ವರ್ಷಪೂರ್ತಿ ಆಚರಿಸಲಾಗುತ್ತಿದೆ. ವರ್ಷಾಚರಣೆಯ 2ನೇ ಕಾರ್ಯಕ್ರಮವಾಗಿ 'ನಾಡದೇವಿಗೆ ನಮನ' ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಡಿಸೆಂಬರ್ 14ರಂದು ಬೆಳಿಗ್ಗೆ 10 ಗಂಟೆಗೆ ನಗರದ ಹಾತಲಗೇರಿ ರಸ್ತೆಯ ವಿವೇಕಾನಂದ ನಗರದ ಕಾಶಿ ವಿಶ್ವನಾಥ ದೇವಸ್ಥಾನದ ಆವರಣದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಮಾರಂಭದಲ್ಲಿ ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ಪುಸ್ತಕ ಪ್ರಶಸ್ತಿ, ಕಲಾ ವಿಕಾಸ ಕನ್ನಡ ಸಿರಿ ಜೀವಮಾನ ಶ್ರೇಷ್ಠ ಸಾಧನೆ ಪ್ರಶಸ್ತಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ, ಸಾಧಕರಿಗೆ ಸನ್ಮಾನ, ಕವಿ ಗೋಷ್ಠಿ, ಕಾವ್ಯಗಾಯನ ಮತ್ತು ನೃತ್ಯ ನಮನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸಾಧಕರು, ಕವಿಗೋಷ್ಠಿಗೆ ಕವಿಗಳು, ಕಾವ್ಯಗಾಯನ, ನೃತ್ಯ ನಮನ ಕಾರ್ಯಕ್ರಮ ನೀಡಲು ಕಲಾವಿದರು ತಮ್ಮ ವಿವರಗಳೊಂದಿಗೆ ಭಾವಚಿತ್ರ ಸಹಿತ, ಹೆಸರು ಮತ್ತು ಪೂರ್ಣ ಅಂಚೆ ವಿಳಾಸದೊಂದಿಗೆ ಡಾ. ಸುಮಾ ಬಸವರಾಜ ಧಾರವಾಡ ಇವರ ವಾಟ್ಸಪ್-9108740044ಗೆ ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಸರು ನೋಂದಾಯಿಸಿಕೊಳ್ಳಲು ನವೆಂಬರ್ 30 ಕೊನೆಯ ದಿನವಾಗಿದೆ ಎಂದು ಕಲಾ ವಿಕಾಸ ಪರಿಷತ್ ರಜತ ಮಹೋತ್ಸವ ಸ್ವಾಗತ ಸಮಿತಿಯ ಅಧ್ಯಕ್ಷ ವಿ.ಕೆ. ಗುರುಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 10ನೇ ಬಾರಿಗೆ ಬಿಹಾರದ ಮುಖ್ಯಮಂತ್ರಿಯಾಗಿ ನಿತೀಶ್ ಕುಮಾರ್ ಪ್ರಮಾಣ ವಚನ ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಜೆಡಿ(ಯು) ಮುಖ್ಯಸ್ಥ ನಿತೀಶ್ ಕುಮಾರ್ ಗುರುವಾರ (ನವೆಂಬರ್ 20) ದಾಖಲೆಯ 10ನೇ ಬಾರಿಗೆ ಬಿಹಾರದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ರಾಜ್ಯಪಾಲ ಆರಿಫ್ ಮುಹಮ್ಮದ್ ಖಾನ್ ಅವರು ಪಾಟ್ನಾದ ಐತಿಹಾಸಿಕ ಗಾಂಧಿ ಮೈದಾನದಲ್ಲಿ ಪ್ರಮಾಣ ವಚನ ಬೋಧಿಸಿದರು. 2005, 2010 ಮತ್ತು 2015ರಲ್ಲಿ ಕೂಡ ಇದೇ ಮೈದಾನದಲ್ಲಿ ನಿತೀಶ್ ಕುಮಾರ್ ಪ್ರಮಾನವಚನ ಸ್ವೀಕರಿಸಿದ್ದರು.

1974ರಲ್ಲಿ ಜಯಪ್ರಕಾಶ್ ನಾರಾಯಣ್ ಅವರು 'ಸಂಪೂರ್ಣ ಕ್ರಾಂತಿ'ಗೆ ಕರೆ ನೀಡಿದ್ದು ಇದೇ ಸ್ಥಳದಲ್ಲಾಗಿತ್ತು.

ನಿತೀಶ್ ಕುಮಾರ್ ಜೊತೆ ಹಿರಿಯ ಬಿಜೆಪಿ ನಾಯಕರಾದ ವಿಜಯ್ ಕುಮಾರ್ ಸಿನ್ಹಾ ಮತ್ತು ಸಾಮ್ರಾಟ್ ಚೌಧರಿ ಉಪಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಚೌಧರಿ ಮತ್ತು ಸಿನ್ಹಾ, ಈ ಹಿಂದಿನ ಎನ್‌ಡಿಎ ಸರ್ಕಾರದಲ್ಲಿ ಕೂಡ ಉಪ ಮುಖ್ಯಮಂತ್ರಿಗಳಾಗಿದ್ದರು.

# ರೈತರ ಹೋರಾಟಕ್ಕೆ ಬೆಂಬಲ



■ ವಿಜಯಸಾಕ್ಷಿ ಸುದ್ದಿ, ಗದಗ

ರೈತರು ಬೆಳೆದ ಮೆಕ್ಕೆಜೋಳದ ಬೆಳೆಯನ್ನು ಖರೀದಿಸಲು ಖರೀದಿ ಕೇಂದ್ರ ಆರಂಭ, ಬೆಂಬಲ ಬೆಲೆ ಹಾಗೂ ಬೆಳೆ ಪರಿಹಾರ ನಿಗದಿಪಡಿಸುವಂತೆ ಆಗ್ರಹಿಸಿ ರೈತರು ಹಮ್ಮಿಕೊಂಡಿದ್ದ ಲಕ್ಷ್ಮೇಶ್ವರ ಬಂದ್‌ನಲ್ಲಿ ಜಯ ಕರ್ನಾಟಕ ಜನಪರ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಬಿ. ಗುಣರಂಜನ್‌ಶೆಟ್ಟಿ ಸಾರಥ್ಯದಲ್ಲಿ ರಾಜ್ಯಾಧ್ಯಕ್ಷ ಜೆ. ಶ್ರೀನಿವಾಸರ ಅಧ್ಯಕ್ಷತೆಯಲ್ಲಿ ರಾಜ್ಯ ಕಾರ್ಯಾಧ್ಯಕ್ಷ ರಾಮಚಂದ್ರಯ್ಯನವರ ಕಾರ್ಯಾಧ್ಯಕ್ಷತೆಯಲ್ಲಿ ಪದಾಧಿಕಾರಿಗಳು ಪಾಲ್ಗೊಂಡು ರೈತರ ಹೋರಾಟಕ್ಕೆ ಬೆಂಬಲ ಸೂಚಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಹಾಲಪ್ಪ ವರವಿ, ಗದಗ ಜಿಲ್ಲಾಧ್ಯಕ್ಷ ಸಣ್ಣಯಲ್ಲಪ್ಪ ವಳಗೇರಿ, ಗೌರವಾಧ್ಯಕ್ಷ ಸದಾನಂದ ನಂದೆಣ್ಣವರ, ಕುಮಾರ್ ಬೆಟಗೇರಿ, ರಮೇಶ್ ಲಮಾಣಿ, ಸಂತೋಷ್ ರಾಠೋಡ, ಮಾಲತೇಶ ರಗಟಿ, ಕೊಟ್ರೇಶ್ ನಿರಲಿಗಿಮಠ, ಮನು ಕಲಾಲ, ಶ್ರೀನಿವಾಸ ಬಸವರೆಡ್ಡಿ, ನಾಗರಾಜ್, ಕೆಂಚಪ್ಪ, ನಿಂಗಪ್ಪ ರಗಟಿ, ಮಹಮ್ಮದಲಿ ಸನದಿ, ಗೋಪಾಲ ಲಮಾಣಿ, ನಾಗೇಶ್ ಲಮಾಣಿ, ಲಕ್ಷ್ಮಣ್ ಲಮಾಣಿ, ಶರಣಪ್ಪಗೌಡ ಪಾಟೀಲ್, ಬಸು ಅತ್ತಿಗೇರಿ, ಸಿದ್ದು ಹಡಗಲಿ, ಸಂತೋಷಗೌಡ ಪಾಟೀಲ, ಹಾಲಪ್ಪ, ಮುದುಕಪ್ಪ, ಈಶ್ವರ, ಮಂಜಣ್ಣ,ರಂಗಪ್ಪ, ಹನುಮಂತ, ಫಕ್ಕೀರೇಶ, ಮಹಾಂತೇಶ, ಶಂಕರಗೌಡ, ನಿಂಗಪ್ಪ, ದುದಪೀರಾ, ನಾಗೇಶ್, ಇಮಾಮಸಾಬ ಮುಂತಾದವರು ಉಪಸ್ಥಿತರಿದ್ದರು.

'ಜಾಗತಿಕ ಸ್ಪರ್ಧಾತ್ಮಕತೆಗಾಗಿ ನವನಾವಿನ್ಯತೆಯ ಸಹಕಾರಿ ವ್ಯವಹಾರದ ಮಾದರಿಗಳು' ಕುರಿತು ಕಾರ್ಯಕ್ರಮ

# ನಾವೀನ್ಯತೆಯೇ ಸ್ಪರ್ಧಾತ್ಮಕತೆಯ ಮೂಲಾಧಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ ಬ್ಯಾಂಕ್ ಧಾರವಾಡ, ಕೆ.ಎಂ.ಎಫ್ ಧಾರವಾಡ, ಹಾಲು ಉತ್ಪಾದಕರ ಸಹಕಾರ ಸಂಘ ಹುಣಸಿಕಟ್ಟಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಜಗಾಪೂರ ಹಾಗೂ ನರಗುಂದ ತಾಲೂಕಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹದ ಅಂಗವಾಗಿ 'ಜಾಗತಿಕ ಸ್ಪರ್ಧಾತ್ಮಕತೆಗಾಗಿ ನವನಾವೀನ್ಯತೆಯ ಸಹಕಾರಿ ವ್ಯವಹಾರದ ಮಾದರಿಗಳು' ಕಾರ್ಯಕ್ರಮವನ್ನು ನರಗುಂದ ತಾಲೂಕಿನ ಹುಣಸಿಕಟ್ಟಿ ಗ್ರಾ.ಪಂನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಉದ್ಘಾಟಿಸಿ ಮಾತನಾಡಿ, ವೇಗವಾಗಿ ಬದಲಾಗಿತ್ತಿರುವ ಜಾಗತಿಕ ಆರ್ಥಿಕತೆಯಲ್ಲಿ, ನಾವೀನ್ಯತೆಯೇ ಸ್ಪರ್ಧಾತ್ಮಕತೆಯ ಮೂಲಾಧಾರವಾಗಿದೆ. ಪ್ರಪಂಚದಾದ್ಯಂತ ಉದ್ಯಮಗಳು, ಹೊಸ ತಂತ್ರಜ್ಞಾನಗಳು ಮತ್ತು ವ್ಯವಹಾರ ತಂತ್ರಗಳನ್ನು ಅಳವಡಿಸಿಕೊಳ್ಳುತ್ತಿದ್ದಂತೆ, ಸಹಕಾರಿ ಸಂಸ್ಥೆಗಳು ಸಾಂಪ್ರದಾಯಿಕವಾಗಿ ಸಮುದಾಯ ಕೇಂದ್ರಿತ ಮತ್ತು ಸದಸ್ಯ ಚಾಲಿತ ವಿಧಾನಕ್ಕೆ ಹೆಸರುವಾಸಿಯಾಗಿವೆ. 21ನೇ ಶತಮಾನದ ಸಹಕಾರಿ ಸಂಸ್ಥೆಗಳು ಇನ್ನು ಮುಂದೆ ಸ್ಥಳೀಯ ಮಾರುಕಟ್ಟೆಗೆ ಸೀಮಿತವಾಗಿಲ್ಲ ಇವುಗಳು ಜಾಗತಿಕವಾಗಿ ಸ್ಪರ್ಧಿಸುತ್ತಿದೆ ಮತ್ತು ಸಹಕರಿಸುತ್ತಿವೆ ಎಂದು ಹೇಳಿದರು.

ಧಾರವಾಡ ಹಾಲು ಒಕ್ಕೂಟದ ನರಗುಂದ ತಾಲೂಕಿನ ವಿಸ್ತರಣಾಧಿಕಾರಿ ದಿಲೀಪ ಐ. ನದಾಫ್ ಪ್ರಸ್ತಾವಿಕವಾಗಿ ಮಾತನಾಡಿದರು. ಸಹಕಾರ ಅಭಿವೃದ್ಧಿ ಅಧಿಕಾರಿ ಬಸವರಾಜ ನಿಡಗುಂದಿ ನರಗುಂದ ತಾಲೂಕಿನ ಸಮಗ್ರ ಸಹಕಾರ ಸಂಘಗಳ ಮಾಹಿತಿಯನ್ನು ವಿವರಿಸಿದರು.

ಹಾಲು ಉತ್ಪಾದಕರ ಸಹಕಾರ ಸಂಘ ಹುಣಸಿಕಟ್ಟಿಯ ಅಧ್ಯಕ್ಷ ಶಂಕರಗೌಡ ಬ.ಗಡಿಯಪ್ಪಗೌಡ್ರ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಹಕಾರಿ ಸಂಘಗಳು ತಮ್ಮ ಸದಸ್ಯರ ಆರ್ಥಿಕ, ಸಾಮಾಜಿಕ, ಮತ್ತು ಸಾಂಸ್ಕೃತಿಕ ಅಗತ್ಯಗಳನ್ನು ಪೂರೈಸಲು ಮೀಸಲಾಗಿರುವ ಪ್ರಜಾಸತ್ತಾತ್ಮಕ ಸಂಸ್ಥೆಗಳು, ಈ ಗುರಿಗಳಿಗೆ ಪ್ರಮುಖ ಕೊಡುಗೆದಾರರಾಗಿ ಸಹಕಾರ ಸಂಘಗಳು ಗುರುತಿಸಲ್ಪಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಜಗಾಪೂರ ಅಧ್ಯಕ್ಷ ಬಸವರಾಜ ಗು.ಬೆಣ್ಣಿ, ಉಪಾಧ್ಯಕ್ಷ ಲಕ್ಷ್ಮಣ ರಾ.ಮುದಕಣ್ಣವರ, ಈರಪ್ಪ ನಿಂಗಪ್ಪ ಲೋಕುರ, ನೀರು ಬಳಕೆದಾರರ ಸಹಕಾರ ಸಂಘದ ಅಧ್ಯಕ್ಷ ಈಶ್ವರಪ್ಪ ಮನಿಕಟ್ಟಿ, ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆಯ ಹಿರಿಯ ಲೆಕ್ಕ ಪರಿಶೋಧಕ ಎ.ಎಂ. ಖಟವಟೆ, ಕೆ.ಸಿ.ಸಿ. ಬ್ಯಾಂಕ್ ನರಗುಂದ ನೀರಿಕ್ಷಕ ಮಹಾಂತೇಶ ಎಸ್.ತಳಗಿನಮನಿ, ಪಿ.ಎಂ. ಗೆನ್ನೂರ, ಧಾರವಾಡ ಹಾಲು ಒಕ್ಕೂಟದ ಸಹಾಯಕ ವ್ಯವಸ್ಥಾಪಕರು ಹಾಗೂ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ ಎಸ್.ಪಟ್ಟೇದ, ನೀರು ಬಳಕೆದಾರರ ಸಹಕಾರ ಸಂಘದ ಕಾರ್ಯದರ್ಶಿ ಸೆಟ್ಟೆಪ್ಪ ಮುಳ್ಳೂರು ಉಪಸ್ಥಿತರಿದ್ದರು.

ಡಾ. ಎಂ.ಬಿ. ಮಡಿವಾಳರ ಉಪನ್ಯಾಸ ನೀಡಿದರು. ಹುಣಸಿಕಟ್ಟಿ ಗ್ರಾ.ಪಂ ಕಾರ್ಯದರ್ಶಿ ಕೆ.ಎನ್. ಹದಗಲ್ ಪ್ರಾರ್ಥಿಸಿದರು. ಹಾಲು ಉತ್ಪಾದಕರ ಸಹಕಾರ ಸಂಘ ಹುಣಸಿಕಟ್ಟಿಯ ಮುಖ್ಯ ಕಾರ್ಯನಿರ್ವಾಹಕ ಎಸ್.ಎಸ್. ಹುಚ್ಚನಗೌಡ್ರ ಸ್ವಾಗತಿಸಿದರು. ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ನಿರೂಪಿಸಿದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಜಗಾಪೂರದ ಮುಖ್ಯ ಕಾರ್ಯನಿರ್ವಾಹಕ ಲಿಂಗರಡ್ಡಿ ಶಿ.ಹಳೇಮನಿ ವಂದಿಸಿದರು.

ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕ ಎಂ.ಎಸ್. ಪಾಟೀಲ ಸಹಕಾರಿ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡುತ್ತಾ, ಆರ್ಥಿಕ ಕಾರ್ಯಸಾಧ್ಯತೆಯನ್ನು ಸಾಮಾಜಿಕ ಜವಾಬ್ದಾರಿಯೊಂದಿಗೆ ಸಂಯೋಜಿಸುವ ವಿಶಿಷ್ಟ ವ್ಯಾಪಾರ ಘಟಕಗಳಾಗಿ ಸಹಕಾರಿಗಳನ್ನು ಬಹಳ ಹಿಂದಿನಿಂದಲೂ ಗುರುತಿಸಲಾಗಿದೆ. ಆದಾಗ್ಯೂ ಜಾಗತಿಕ ಸ್ಪರ್ಧಾತ್ಮಕತೆಯು ಸಾಮಾಜಿಕ ಬದ್ಧತೆಗಿಂತ ಹೆಚ್ಚಿನದನ್ನು ಬಯಸುತ್ತದೆ. ಇದಕ್ಕೆ ಹೊಂದಿಕೊಳ್ಳುವಿಕೆ, ತಂತ್ರಜ್ಞಾನ ಅಳವಡಿಕೆ, ಮಾರುಕಟ್ಟೆ ಸ್ಪಂದಿಸುವಿಕೆ ಮತ್ತು ನಾವೀನ್ಯತೆಯ ಅಗತ್ಯವಿದೆ ಎಂದರು.

# ಜಾನಪದ ಕಲೆ ಉಳಿಸಿ-ಬೆಳೆಸುವ ಕಾರ್ಯ ಶ್ಲಾಘನೀಯ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮನದ ಕತ್ತಲೆಯನ್ನು ಕಳೆದು ಜ್ಞಾನದ ಬೆಳಕು ಚೆಲ್ಲುವ ಮೂಲಕ ಮನುಷ್ಯನ ಬಾಳಲ್ಲಿ ಹೊಸ ಚೈತನ್ಯ, ಹರುಷ ತರುವುದಕ್ಕಾಗಿ ಆಚರಿಸುವಂತಹ ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಜಾನಪದ ಕಲೆ ಉಳಿಸಿ-ಬೆಳೆಸುವ ಕಾರ್ಯ ಶ್ಲಾಘನೀಯವಾಗಿದೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಹೇಳಿದರು.

ಅವರು ಶಿರಹಟ್ಟಿಯ ಶ್ರೀ ಬೀರೇಶ್ವರ ಸೇವಾ ಸಮಿತಿ ವತಿಯಿಂದ 20ನೇ ವರ್ಷದ ಶ್ರೀ ಬೀರೇಶ್ವರ ಕಾರ್ತಿಕೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಯುವ ಸಂಭ್ರಮದ ಜಾನಪದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಾನಪದ ಕಲೆ, ಸಂಸ್ಕೃತಿ, ಸಾಹಿತ್ಯ, ಪರಂಪರೆ ಅದ್ಭುತವಾಗಿದೆ. ಮಕ್ಕಳು ಓದಿನ ಜೊತೆ ಜಾನಪದ ಕಲೆಯನ್ನು ಕಲಿಯಬೇಕು. ಹಳ್ಳಿ ಜನರ ನರ-ನಾಡಿಗಳಲ್ಲಿ ಜಾನಪದ ಕಲೆ ಹಾಸುಹೊಕ್ಕಾಗಿದೆ. ತಮ್ಮ ಸುಖ-ದುಃಖ, ಸುಗ್ಗಿಯ ಕ್ಷಣಗಳು ಮತ್ತು ಗ್ರಾಮೀಣ ಬದುಕಿನ ಸೊಗಡನ್ನು ಇಂದಿಗೂ ಜಾನಪದ ಹಾಡುಗಳಲ್ಲಿ ಕಾಣಲು ಸಾಧ್ಯ. ಆಧುನಿಕತೆಯ ಭರಾಟೆಯಲ್ಲಿ ಜಾನಪದ ಕಲೆ ಕಣ್ಮರೆಯಾಗುತ್ತಿದೆ. ನಶಿಸುತ್ತಿರುವ ಜಾನಪದ ಕಲೆ, ಕಲಾವಿದರ ಉಳಿವಿಗಾಗಿ ಸತತ 20 ವರ್ಷದಿಂದ ಶ್ರೀ ಬೀರೇಶ್ವರ ಕಾರ್ತಿಕೋತ್ಸವದ ಅಂಗವಾಗಿ ಅದ್ದೂರಿ ಜಾನಪದ ಕಾರ್ಯಕ್ರಮ ಆಯೋಜಿಸಿ ಕಲಾವಿದರನ್ನು ಪ್ರೋತ್ಸಾಹಿಸುತ್ತಿರುವುದು ಮಹತ್ತರವಾಗಿದೆ ಎಂದರು.

ನಂತರ ಪ್ರಸಿದ್ಧ ಜಾನಪದ ಕಲಾವಿದರಾದ ಟ್ರೆಂಡಿಂಗ್ ಸ್ಟಾರ್ ಮ್ಯೂಸಿಕ್ ಮೈಲಾರಿ, ಎಚ್.ಬಿ. ಪರೀಟ, ಪರಸು ಕೊಲೂರ, ಲಕ್ಷ್ಮೀ ಬಿಜಾಪುರ, ಹನುಮಂತ ಬಟ್ಟೂರ ಸೇರಿ ವಿವಿಧ ಕಲಾವಿದರಿಂದ ಜಾನಪದ ಹಾಡುಗಳ ಕಾರ್ಯಕ್ರಮ ನಡೆಯಿತು.

ಕಾಶಪ್ಪ ಸ್ವಾಮಿ, ಆನಂದ ಗಡ್ಡದೇವರಮಠ, ಪ.ಪಂ ಮಾಜಿ ಸದಸ್ಯ ಮಂಜುನಾಥ ಗಂಟಿ, ವಿರೂಪಾಕ್ಷಪ್ಪ ಪಡಿಗೇರ, ಹೊನ್ನೇಶ ಪೋಟಿ, ದೇವಪ್ಪ ಲಮಾಣಿ, ನಾಗರಾಜ ಲಕ್ಕುಂಡಿ, ಎಂ.ಕೆ. ಲಮಾಣಿ, ಹೊನ್ನಪ್ಪ ಶಿರಹಟ್ಟಿ, ದೇವಪ್ಪ ಬಟ್ಟೂರ, ಮಹೇಶ ಹಾರೋಗೇರಿ, ಆನಂದ ಮಾಳೆಕೊಪ್ಪ, ಭಾಗ್ಯಶ್ರೀ ಬಾಬಣ್ಣ, ಮಂಜುನಾಥ ಹಮ್ಮಿಗಿ, ಕರಿಯಪ್ಪ ಕುಳಗೇರಿ, ಆನಂದ ಕೋಳಿ, ಹೇಮಂತ ಕೆಂಗೊಂಡ, ಮಹೇಶ ಹಾರೊಗೇರಿ ಮುಂತಾದವರು ಉಪಸ್ಥಿತರಿದ್ದರು.

# ಯುವಕರಿಗೆ ಸಂಸ್ಕಾರ, ಸನ್ನಡತೆ, ಶಿಕ್ಷಣ ಮುಖ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ದಿನಮಾನಗಳಲ್ಲಿ ಪಾಲಕ-ಪೋಷಕರು ತಮ್ಮ ಮಕ್ಕಳಿಗೆ ಧರ್ಮದ ಹಾದಿಯಲ್ಲಿ ಮುನ್ನಡೆಸುವ ಮೂಲಕ ಅವರಿಗೆ ಒಳ್ಳೆಯ ಸಂಸ್ಕಾರ, ಸನ್ನಡತೆಯನ್ನು ರೂಢಿಸಬೇಕು. ಸಂಸ್ಕಾರ-ಸನ್ನಡತೆ ಇಲ್ಲದಿದ್ದರೆ ಶಿಕ್ಷಣಕ್ಕಿಲ್ಲ ನೆಲೆ-ಬೆಲೆ ಎಂದು ಶ್ರೀಕ್ಷೇತ್ರ ಪಂಡರಾಪೂರದ ಪೂಜ್ಯ ಪ್ರಭಾಕರ (ದಾದಾ) ಬೋಧಲೆ ಮಹಾರಾಜರು ಹೇಳಿದರು.

ಅವರು ಗದಗ ವಿಠ್ಠಲ ಮಂದಿರದಲ್ಲಿ ಗದಗ ಭಾವಸಾರ ಕ್ಷತ್ರಿಯ ಸಮಾಜ ಏರ್ಪಡಿಸಿದ್ದ ಸಂತ ಶ್ರೀ ಜ್ಞಾನೇಶ್ವರ ಮಹಾರಾಜರ 729ನೇ ಸಂಜೀವಿನಿ ಸಮಾಧಿ ನಿಮಿತ್ತ ದಿಂಡಿ ಸೋಹಳಾ ಉತ್ಸವದ ಅಂಗವಾಗಿ ಜರುಗಿದ ಕಾಲಾಕೀರ್ತನೆಯಲ್ಲಿ ಮಾತನಾಡಿದರು.

ಯುವಕರು ಕೇವಲ ಮನೆ, ಸಮಾಜಕ್ಕೆ ಮಾತ್ರವಲ್ಲ, ದೇಶಕ್ಕೆ ಆಸ್ತಿಯಾಗಿದ್ದಾರೆ. ಇಂತಹ ಯುವ ಜನಾಂಗವನ್ನು ದುಶ್ಚಟಗಳಿಂದ ದೂರವಿರಿಸಿ ಸದೃಢವಾಗಿ ಬೆಳೆಸಬೇಕು.

ಯು ಎಂದರೆ ಯುದಿಷ್ಠನಲ್ಲಿದ್ದಂತಹ ನೀತಿ, ವ ಎಂದರೆ ವಸಿಷ್ಠನಲ್ಲಿದ್ದಂತಹ ಜ್ಞಾನ, ಕ ಎಂದರೆ ಗಾನ, ಕೇಳು ಎಂದರ್ಥ. ಇವೆಲ್ಲವೂ ಸಮ್ಮಿಳಿತಗೊಂಡು 'ಯುವಕ' ಎಂದು ಅರ್ಥೈಸಬಹುದಾಗಿದೆ ಎಂದು ವಿಶ್ಲೇಷಿಸಿದರು.

ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಯುವವರನ್ನು ದೇವರು ಎಂದಿಗೂ ಕೈಬಿಡುವುದಿಲ್ಲ. ಅವರಿಗೆ ಭವಿಷ್ಯದಲ್ಲಿ ಫಲ ಪ್ರಾಪ್ತಿಯಾಗುವದು ನಿಶ್ಚಿತ. ಆದ್ದರಿಂದ ಎಲ್ಲರೂ ಧರ್ಮವಂತರಾಗಿ, ಕಾಯಕ ಮಾಡಿ, ದಾಸೋಹ, ಧರ್ಮ ಕಾರ್ಯ ಮಾಡಿ ಎಂದರಲ್ಲದೆ, ಗದಗ ಭಾವಸಾರ ಕ್ಷತ್ರಿಯ ಸಮಾಜವು ಉತ್ಸವ ಸಮಿತಿ, ಯುವಕ ಸಮಿತಿ ಹಾಗೂ ಮಹಿಳಾ ಸಮಿತಿಯ ಮೂಲಕ ಎಲ್ಲ ಧಾರ್ಮಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಬಂದಿದ್ದಾರೆ.

ಇವರೆಲ್ಲರಿಗೂ ಸೂಕ್ತ ಮಾರ್ಗದರ್ಶನ ಮಾಡಿದ ಸಮಾಜದ ಗುರು-ಹಿರಿಯರು ಅಭಿನಂದನಾರ್ಹರು ಎಂದರು.

ಕಾಲಾಕೀರ್ತನೆ ಬಳಿಕ ಆರತಿ, ಮಹಾಪ್ರಸಾದ ಜರುಗಿತು. ಸಂಜೆ ದಿಂಡಿಯು ನಗರ ಪ್ರದಕ್ಷಿಣೆಯ ನಂತರ ದೇವಸ್ಥಾನಕ್ಕೆ ಮರಳಿತು.

# ಜಲ ಸಂರಕ್ಷಣೆಯಲ್ಲಿ ಗದಗ ರಾಜ್ಯಕ್ಕೆ ಪ್ರಥಮ

▶▶ ಮೊದಲನೇ ಪುಟದಿಂದ

ಸಹಭಾಗಿತ್ವದೊಂದಿಗೆ ಸಮರ್ಥ ಪರಿಹಾರವನ್ನು ಒದಗಿಸುವುದು ಈ ಕಾರ್ಯಕ್ರಮದ ಮುಖ್ಯ ಗುರಿಯಾಗಿತ್ತು.

ಈ ಹಿನ್ನೆಲೆಯಲ್ಲಿ 2024 ಏಪ್ರಿಲ್ 1ರಿಂದ 20205 ಮಾರ್ಚ್ 31ರವರೆಗಿನ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಸೇರಿದಂತೆ ವಿವಿಧ ಯೋಜನೆಗಳಡಿ ಬೃಹತ್ ಜಲ ಕ್ರಾಂತಿಗೆ ನಾಂದಿ ಹಾಡಿದವು. ಈ ಅವಧಿಯಲ್ಲಿ ಒಟ್ಟು 11,971 ಜಲ ಸಂರಕ್ಷಣೆ ಕಾಮಗಾರಿಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಜಲಸಂಚಾಯಿ ಪೋರ್ಟಲ್‌ನಲ್ಲಿ ದಾಖಲಿಸಲಾಯಿತು.

ಮುಖ್ಯವಾಗಿ 11,329 ವೈಯಕ್ತಿಕ ಮತ್ತು ಸಮುದಾಯ ಬದು ನಿರ್ಮಾಣ ಮಾಡಲಾಯಿತು. 465 ಮಳೆ ನೀರು ಕೊಯ್ಲು ಕಾಮಗಾರಿಗಳು, 75 ಬೋರವೆಲ್ ರಿಚಾರ್ಜ್, 10 ಚೆಕ್ ಡ್ಯಾಂ ನಿರ್ಮಾಣದಿಂದ ಗದಗ ಜಿಲ್ಲೆಯ ಜಲ ಸಂರಕ್ಷಣೆಯ ಚಿತ್ರಣವೇ ಬದಲಾಗಿದೆ. ಗದಗ ಜಿಲ್ಲಾ ಪಂಚಾಯಿತಿಯ ಈ ಶ್ರಮಕ್ಕೆ ಕೇಂದ್ರ ತಂಡದಿಂದಲೂ ಮನ್ನಣೆ ದೊರೆತಿದೆ.

ಕೇಂದ್ರ ನೋಡಲ್ ಅಧಿಕಾರಿಗಳು 2025 ಜೂನ್ 16ರಿಂದ 21ರವರೆಗೆ ಸ್ಥಳ ಪರಿಶೀಲನೆ, ದಾಖಲೆಗಳ ಪರಿಶೀಲನೆ ನಡೆಸಿ, ಕಾಮಗಾರಿಗಳು ಉನ್ನತ ಮಾನದಂಡಗಳನ್ನು ಪೂರೈಸಿರುವುದನ್ನು ಖಚಿತಪಡಿಸಿಕೊಂಡು ಮೆಚ್ಚುಗೆ ವ್ಯಕ್ತಪಡಿಸಿದ್ದು, ಪ್ರಶಸ್ತಿಗೆ ಕಾರಣವಾಗಿದೆ.


# ಇಂದು ಚಿಗುರು ಸಾಂಸ್ಕೃತಿಕ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ಚಿಗುರು ಸಾಂಸ್ಕೃತಿಕ ಕಾರ್ಯಕ್ರಮವನ್ನು ನ. 21 ರಂದು ಸಂಜೆ 5 ಗಂಟೆಗೆ ಗದಗನ ಮಲ್ಲಸಮುದ್ರ ಹತ್ತಿರದ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ.ಎಚ್.ಚನ್ನೂರ , ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ಅಮಿತ ಬಿದರಿ ಆರ್, ಮಲ್ಲಸಮುದ್ರದ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯ ಪ್ರಾಚಾರ್ಯರಾದ ಶ್ರೀಮತಿ ಮಂಜುಳಾ ಎಸ್ ಆರಿಕಟ್ಟಿ ಆಗಮಿಸುವರು. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ಶಂಕರಪ್ಪ ಆರ್.ಸಂಕಣ್ಣವರ, ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಅರ್ಜುನ ಗೊಳಸಂಗಿ, ಕರ್ನಾಟಕ ಬಂಜಾರಾ ಅಕಾಡೆಮಿ ಸದಸ್ಯರಾದ ಶ್ರೀಮತಿ ಸಾವಿತ್ರಿ ಲಮಾಣಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಸಾಂಸ್ಕೃತಿಕ ಕಾರ್ಯಕ್ರಮಗಳು: ಶಾಸ್ತ್ರೀಯ ನೃತ್ಯ, ಸಮೂಹ ನೃತ್ಯ, ನಾಟಕ, ಸುಗಮ ಸಂಗೀತ, ಏಕಪಾತ್ರಾಭಿನಯ, ಜನಪದ ಗೀತೆಗಳ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿವೆ.









ಸರ್ಕಾರ ಬೆಂಬಲ ಬೆಲೆಯೋಜನೆಯಡಿ ಗೋವಿನಜೋಳ ಖರೀದಿಸಬೇಕು ಎಂಬ ದಿಟ್ಟ ನಿಲುವಿನೊಂದಿಗೆ ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಮತ್ತು ಎಲ್ಲ ಸಂಘಟನೆಗಳ ಸಹಯೋಗದಲ್ಲಿ ಗುರುವಾರ ನೀಡಿದ್ದ ಲಕ್ಷ್ಮೇಶ್ವರ ಬಂದ್‌ನ ವಿವಿಧ ದೃಶ್ಯಾವಳಿಗಳು.

## ಇಂದು ಸರ್ವಧರ್ಮ ಸಾಮೂಹಿಕ ವಿವಾಹ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ತಾಲೂಕಿನ ಸಂದಿಗವಾಡ ಗ್ರಾಮದ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ನ.21 ರಂದು ಬೆಳಗ್ಗೆ 11.30ಕ್ಕೆ ಸರ್ವಧರ್ಮ ಸಾಮೂಹಿಕ ವಿವಾಹ, ಕಲ್ಲಯ್ಯಜ್ಜನವರ 2998ನೇ ತುಲಾಭಾರ, ಕಲಬುರ್ಗಿ ಶರಣ ಬಸವೇಶ್ವರ ಪುರಾಣ ಮಹ ಮಂಗಲೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ ಕಲ್ಮೇಶ್ವರ ಭಜನಾ ಸಂಘ, ಎಡೆಯೂರು ಸಿದ್ಧಲಿಂಗೇಶ್ವರ ಭಜನಾ ಸಂಘ ಹಾಗೂ ಕರಡಿ ಮಜಲು, ದುರ್ಗಾದೇವಿ ಡೊಳ್ಳಿನ ಮೇಳ ಹಾಗೂ ಕುಂಭ ಮೇಳದೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ಶರಣ ಬಸವೇಶ್ವರ ಪುರಾಣ ಮೂರ್ತಿಯು ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಸಾನ್ನಿಧ್ಯ ಬದಾಮಿ ಹಿರೇಮಠದ ಶಿವಪೂಜಾ ಸ್ವಾಮೀಜಿ ವಹಿಸುವರು.

ಮರುಳಸಿದ್ದಯ್ಯ ಹಿರೇಮಠ ಅಧ್ಯಕ್ಷತೆ ವಹಿಸುವರು. ಬೆಳಗ್ಗೆ 11ಕ್ಕೆ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಡಾ.ಕಲ್ಲಯ್ಯಜ್ಜನವರ 2998ನೇ ತುಲಾಭಾರ ಗ್ರಾಮದ ಸರ್ವ ತಾಯಂದಿರ ಬಳಗದಿಂದ ಹಮ್ಮಿಕೊಳ್ಳಲಾಗಿದೆ. ಸಾಯಂಕಾಲ 7ಕ್ಕೆ ಕಲಬುರ್ಗಿ ಶರಣಬಸವೇಶ್ವರ ಪುರಾಣ ಮಹಾಮಂಗಲೋತ್ಸವ ಹಮ್ಮಿಕೊಳ್ಳಲಾಗಿದೆ. ಸಾನ್ನಿಧ್ಯ ಬ್ರಹನ್ಮಠ ಅಡ್ನೂರ ರಾಜೂರ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ವಹಿಸುವರು.

ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಕಲ್ಲಯ್ಯಜ್ಜನವರ ಭಾಗವಹಿಸುವರು. ಕಳೆದ ಒಂದು ತಿಂಗಳಿಂದ ಡಾ.ಪಂ.ಪುಟ್ಟರಾಜ ಕವಿ ಗವಾಯಿಗಳ ಶಿಷ್ಯಂದಿರಾದ ಪಂ.ವೀರುಪಾಕ್ಷ ಶಾಸ್ತ್ರಿಗಳು ಪುರಾಣ ಪ್ರವಚನ ಮಾಡಿದರು. ನಿಜಗುಣೇಶ್ವರ ಹೂಗಾರ ಸಂಗೀತ ಹಾಗೂ ಮಲ್ಲಿಕಾರ್ಜುನ ಹೂಗಾರ ತಬಲಾ ಸೇವೆ ಮಾಡಿದರು ಎಂದು ಸಂದಿಗವಾಡ ಗ್ರಾಮದ ಪದಾಧಿಕಾರಿಗಳು ತಿಳಿಸಿದ್ದಾರೆ.

## ದೆಹಲಿ ಗಲಭೆ ಪ್ರಕರಣ; ಶಾರ್ಜೀಲ್ ಇಮಾಮ್ ಭಾಷಣದ ವಿಡಿಯೋ ತೋರಿಸಿದ ಪೊಲೀಸರು!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಗಲಭೆ ಪ್ರಕರಣದಲ್ಲಿ ಆರೋಪಿಗಳಾಗಿರುವ ಉಮರ್ ಖಾಲಿದ್,ಶಾರ್ಜೀಲ್ ಇಮಾಮ್, ಗುಲ್ಫಿಶಾ ಫಾತಿಮಾ,ಮೀರಾನ್ ಹೈದರ್,ಶಿಫಾಉರ್‌ರೆಹಮಾನ್, ಮುಹಮ್ಮದ್ ಸಲೀಮ್ ಖಾನ್ ಮತ್ತು ಶಾದಾಬ್ ಅಹ್ಮದ್ ಅವರ ಜಾಮೀನು ಅರ್ಜಿಗಳನ್ನು ವಿರೋಧಿಸಿ ದೆಹಲಿ ಪೊಲೀಸರು ಗುರುವಾರ (ನವೆಂಬರ್ 20) ತಮ್ಮ ವಾದ ಮಂಡನೆ ಮುಂದುವರೆಸಿದರು.

ನ್ಯಾಯಮೂರ್ತಿ ಅರವಿಂದ್ ಕುಮಾರ್ ಮತ್ತು ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಅವರನ್ನೊಳಗೊಂಡ ಪೀಠವು ವಾದ ಆಲಿಸಿತು.

### ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇದ್ದರೆ ಕೂಡಲೇ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸಲಿ

# ರೈತರ ತಾಳ್ಮೆ ಪರೀಕ್ಷಿಸಿದರೆ ಉಗ್ರ ಹೋರಾಟ



ಲಕ್ಷ್ಮೇಶ್ವರ ಬಂದ್ ಕರೆಯ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಗದಗ ಎಸ್ಪಿ ರೋಹನ್ ಜಗದೀಶ್ ಮಾರ್ಗದರ್ಶನದಲ್ಲಿ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಬಿಜಾಪೂರದ ರಾಮನಗೌಡ್ರ ಹಟ್ಟಿ, ಡಿವೈಎಸ್‌ಪಿಗಳಾದ ಮುರ್ತುಜಾ ಖಾದ್ರಿ, ಪ್ರಭುಗೌಡ ಡಿ.ಕೆ, ಸಿಪಿಐ ಬಿ.ವಿ. ನೇಮಗೌಡ್ರ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ, ಸೇರಿದಂತೆ 5 ಸಿಪಿಐ, 8 ಪಿಎಸ್‌ಐ, 14 ಎಎಸ್‌ಐ, 3 ಕೆಎಸ್‌ಆರ್‌ಪಿ ತುಕಡಿ, 4 ಡಿಆರ್ ಸೇರಿ ಒಟ್ಟು 150ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳು ಬಂದೋಬಸ್ತ್ ಕಾರ್ಯ ನಿರ್ವಹಿಸಿದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೇಂದ್ರ ಮತ್ತು ರಾಜ್ಯ ಸರಕಾರ ಜವಾಬ್ದಾರಿಯಿಂದ ನುಣುಚಿಕೊಳ್ಳದೇ ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ಸ್ಥಾಪಿಸಬೇಕು. ರೈತರ ತಾಳ್ಮೆ ಪರೀಕ್ಷಿಸಿದರೆ ಹೋರಾಟ ಉಗ್ರ ಸ್ವರೂಪ ಪಡೆದುಕೊಳ್ಳುತ್ತದೆ ಎಂದು ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಮಂಜುನಾಥ ಮಾಗಡಿ ಎಚ್ಚರಿಸಿದರು.

ಸರ್ಕಾರ ಬೆಂಬಲ ಬೆಲೆಯೋಜನೆಯಡಿ ಗೋವಿನಜೋಳ ಖರೀದಿಸಬೇಕು ಎಂದು 6 ದಿನಗಳಿಂದ ಅನಿರ್ದಿಷ್ಠಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದು, ಗುರುವಾರ ಲಕ್ಷ್ಮೇಶ್ವರ ಬಂದ್ ಕರೆ ನೀಡಿದ್ದರು. ಈ ವೇಳೆ ರೈತರ ಬೃಹತ್ ಪ್ರತಿಭಟನಾ ರ್‍ಯಾಲಿ ಬಳಿಕ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಈಗಾಗಲೇ ಒಂದು ತಿಂಗಳಿಂದ ರೈತರು ಗೋವಿನಜೋಳ ಒಕ್ಕಲಿ ಮಾಡಿ ಸಂಗ್ರಹಿಸಿದ್ದಾರೆ. ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ 1600–1700 ರೂನಂತೆ ಮಾರಾಟವಾಗುತ್ತಿದೆ. 2400 ರೂ ಬೆಂಬಲ ಬೆಲೆ ಘೋಷಣೆಗೆ ಸೀಮಿತವಾಗಿದೆ. ಸರ್ಕಾರಕ್ಕೆ ರೈತರ ಬಗ್ಗೆ ಕಿಂಚಿತ್ತಾದರೂ ಕಾಳಜಿ ಇದ್ದರೆ ಕೂಡಲೇ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

ರೈತರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ ಹೂವಿನಶಿಗ್ಲಿಯ ಚನ್ನವೀರ ಶ್ರೀಗಳು, ಕುಂದಗೋಳ ಕಲ್ಯಾಣಪುರ ಮಠದ ಬಸವಣ್ಣಜ್ಜನವರು, ಅತ್ತಿಮತ್ತೂರಿನ ನಿಜಗುಣಶಿವಯೋಗಿಗಳು, ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರು, ಜಮಖಂಡಿ ಶ್ರೀಗಳು ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ, ಕನ್ನಡಪರ ಸಂಘಟನೆಯ ಶರಣು ಗೋಡಿ, ಹೊನ್ನಪ್ಪ ವಡ್ಡರ ಮಾತನಾಡಿ, ರೈತರೆಲ್ಲ ಬೆಳೆ ಮಾರಾಟ ಮಾಡಿದ ಮೇಲೆ ಖರೀದಿ ಕೇಂದ್ರ ಪ್ರಾರಂಭವಾದರೆ ಅದು ಸ್ಮಶಾನ ಕೇಂದ್ರ ತೆರೆದಂತಾಗುತ್ತದೆ. ಸಂಕಷ್ಟದಲ್ಲಿರುವ ರೈತರಿಗೆ ಈಗಲಾದರೂ ಈ ಭಾಗದ ಸಂಸದರು, ಸಚಿವರು, ಶಾಸಕರು ರೈತರ ಹೋರಾಟಕ್ಕೆ ಬೆಂಬಲವಾಗಿ ನಿಂತು ಅವರಿಗೆ ನ್ಯಾಯ ಕೊಡಿಸಲು ಮುಂದಾಗಬೇಕು. ರೈತರ ಹೋರಾಟಕ್ಕೆ ಬೆದರಿಕೆಗಳು ಬರುತ್ತಿವೆ. ಈ ಹೋರಾಟ ಸ್ವಂತ, ಸ್ವಾರ್ಥದ ಹೋರಾಟವಲ್ಲ. ರೈತರ ಆಕ್ರೋಶದ ಕಟ್ಟೆಯೊಡೆದು ಉಂಟಾಗುವ ಅನಾಹುತಕ್ಕೆ ಜನಪ್ರತಿನಿಧಿಗಳು, ಅಧಿಕಾರಿಗಳು ಉತ್ತರ ಕೊಡಬೇಕಾಗುತ್ತದೆ. ಗೋವಿನ ಜೋಳ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸಿದರೆ ಶಾಂತಿ, ಇಲ್ಲದಿದ್ದರೆ ಕ್ರಾಂತಿ ಎಂದು ಎಚ್ಚರಿಸಿದರು.

ಈ ವೇಳೆ ರೈತ ಮುಖಂಡರಾದ ಮಾಣಿಕಮ್ಮ ಚಿಲ್ಲೂರ, ಮಹೇಶ ಹೊಗೆಸೊಪ್ಪಿನ, ಪರಮೇಶ್ವರ ನಾಯ್ಕರ, ನಾಗರಾಜ ಚಿಂಚಲಿ, ವಿಜಯ ಕುಮಾರ ಮಹಾಂತಶೆಟ್ಟರ, ವಿಜಯ ಹತ್ತಿಕಾಳ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೇದಿಕೆ ರಾಜ್ಯಾಧ್ಯಕ್ಷ ಸುರೇಶ ಗೋಕಾಕ ಪರಮೇಶ್ವರ ನಾಯಕರ ಮಾತನಾಡಿದರು.

ರೈತ ಮುಖಂಡರಾದ ಎಂ.ಎಸ್. ದೊಡ್ಡಗೌಡರ, ಶಂಕ್ರಣ್ಣ ಕಾಳೆ, ನಿಂಬಣ್ಣ ಮಡಿವಾಳರ, ಈರಣ್ಣ ಪೂಜಾರ, ಟಾಕಪ್ಪ ಸಾತಪೂತೆ, ಬಸವರಾಜ ಸಾತಪೂತೆ, ಬಸವಣ್ಣೆಪ್ಪ ನಂದೆಣ್ಣವರ, ಎಂ.ಎಂ. ಗದಗ, ದಾದಾಪೀರ ಮುಚ್ಚಾಲೆ, ಸುಭಾಷ್ ಬಟಗುರ್ಕಿ, ಸುಭಾನ ಹೊಂಬಳ, ಪ್ರವೀಣ ಬಾಳಿಕಾಯಿ, ಶಂಕರ ಬ್ಯಾಡಗಿ, ಚನ್ನಪ್ಪ ಷಣ್ಮುಖಿ, ಪ್ರಕಾಶ ಕೊಂಚಿಗೇರಿಮಠ, ಭಾಗ್ಯಶ್ರೀ ಬಾಬಣ್ಣ, ಲೋಕೇಶ ಸುತಾತ, ಮುತ್ತಣ್ಣ ಗಡೆಪ್ಪನವರ, ಚಂದ್ರಗೌಡ ಕರಿಗೌಡ್ರ, ವಸಂತ ಕರಿಗೌಡ್ರ, ಭರಮಣ್ಣ ರೊಟ್ಟಿಗವಾಡ, ಸುರೇಶ ಹಟ್ಟಿ, ನಾಗೇಶ ಅಮರಾಪೂರ, ಈರಣ್ಣ ಪವಾಡದ, ಸೋಮಣ್ಣ ಡಾಣಗಲ್, ಬಸಣ್ಣ ಹಂಜಿ, ಪರಮೇಶಗೌಡ ಪಾಟೀಲ, ವಿಜಯ ಹತ್ತಿಕಾಳ, ಬಸವೇಶ ಮಹಾಂತಶೆಟ್ಟರ, ಗಿರೀಶ ಅಗಡಿ, ಬಸವರಾಜ ಹಿರೇಮನಿ ಸೇರಿದಂತೆ ಅನೇಕರಿದ್ದರು.

### ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ, ವಾಣಿಜ್ಯ, ಬಿಸಿಎ, ಸ್ನಾತಕೋತ್ತರ ಕೇಂದ್ರದಲ್ಲಿ ಕಾರ್ಯಕ್ರಮ

# ರಾಜ್ಯ ಮಟ್ಟದ ವಿಶೇಷ ಕಮ್ಮಟ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕರ್ನಾಟಕ ಸರಕಾರದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ, ವಾಣಿಜ್ಯ, ಬಿಸಿಎ ಹಾಗೂ ಸ್ನಾತಕೋತ್ತರ ಕೇಂದ್ರ ನರೇಗಲ್ಲ, ಐ.ಕ್ಯೂ.ಎ.ಸಿ ಹಾಗೂ ಕನ್ನಡ ವಿಭಾಗದ ವತಿಯಿಂದ ಒಂದು ದಿನದ ರಾಜ್ಯಮಟ್ಟದ ವಿಶೇಷ ಕಮ್ಮಟವು ಕಾಲೇಜಿನ ಸಭಾಭವನದಲ್ಲಿ ನ. 21ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಮ್ಮಟವನ್ನು ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ಉದ್ಘಾಟಿಸಲಿದ್ದು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯೆ ದಾಕ್ಷಾಯಣಿ ಹುಡೇದ ಉಪಸ್ಥಿತಿಯಲ್ಲಿ ನಿವೃತ್ತ ಪ್ರಾಚಾರ್ಯ ಹೊಳಿಯಪ್ಪ ಯಲಬುರ್ಗಿ ಸಹಕಾರಿ ಕ್ಷೇತ್ರ ಮತ್ತು ಗದಗ ಜಿಲ್ಲೆ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಮಧ್ಯಾಹ್ನ 12 ಗಂಟೆಯಿಂದ ನಡೆಯಲಿರುವ 1ನೇ ಗೋಷ್ಠಿಯ ಅಧ್ಯಕ್ಷತೆಯನ್ನು ಗದಗ ಪಿಪಿಜಿ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಾಜಶೇಖರ ದಾನರೆಡ್ಡಿ ವಹಿಸಲಿದ್ದು, ಮುಳಗುಂದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ರಮೇಶ ಕಲ್ಲನಗೌಡರ ಕುಮಾರವ್ಯಾಸ ಮತ್ತು ಕನ್ನಡದ ದೇಸಿತನ ಕುರಿತು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಸಾರಂಗದ ನಿರ್ದೇಶಕ ಡಾ. ಸಂತೋಷ ನಾಯಕ ಆರ್ ಶಿಕ್ಷಣ ಆಯೋಗಗಳು–ಶಿಫಾರಸ್ಸು–ಅನುಷ್ಠಾನ ಕುರಿತು ವಿಶೇಷ ಉಪನ್ಯಾಸಗಳನ್ನು ನೀಡಲಿದ್ದಾರೆ.

ಮಧ್ಯಾಹ್ನ 2.30ರಿಂದ ನಡೆಯುವ ಗೋಷ್ಠಿ–2ರ ಅಧ್ಯಕ್ಷತೆಯನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಡಾ. ಕೆ. ರವೀಂದ್ರನಾಥ ವಹಿಸಲಿದ್ದಾರೆ. ಹುಲಕೋಟಿಯ ಗದಗ ಸಹಕಾರಿ ಜವಳಿ ಪಿಯು ಕಾಲೇಜಿನ ಪ್ರಾಚಾರ್ಯ ಡಾ. ಅರ್ಜುನ ಗೊಳಸಂಗಿ ಕರ್ನಾಟಕ ಏಕೀಕರಣ ಮತ್ತು ಗದಗ ಜಿಲ್ಲೆ ಕುರಿತು, ಸ.ಪ್ರ.ದ ಮಹಿಳಾ ಕಾಲೇಜಿನ ಕನ್ನಡ ಪ್ರಾಧ್ಯಾಪಕಿ ಡಾ. ಸುಜಾತಾ ಬರದೂರ ಮುದ್ರಣ ಕ್ಷೇತ್ರ ಮತ್ತು ಗದಗ ಜಿಲ್ಲೆ ಕುರಿತು ವಿಶೇಷ ಉಪನ್ಯಾಸಗಳನ್ನು ನೀಡಲಿದ್ದಾರೆ.

ಸಂಜೆ 4ರಿಂದ ಸಂವಾದ ಕಾರ್ಯಕ್ರಮ ಜರುಗಲಿದ್ದು, ನರೇಗಲ್ಲದ ಡಾ. ಕಲ್ಲಯ್ಯ ಹಿರೇಮಠ, ಪುಂಡಲೀಕ ಮಾದರ, ಎಫ್.ಎನ್. ಹುಡೇದ, ಶಿವಮೂರ್ತಿ ಕುರೇರ, ಡಾ. ಅಂದಯ್ಯ ಅರವಟಗಿಮಠ, ಡಾ. ನಾಗರಾಜ ಬಳಿಗಾರ, ಸಿದ್ದಲಿಂಗೇಶ ಸಜ್ಜನಶೆಟ್ಟರ ಮತ್ತು ಮುಂಡರಗಿಯ ಡಾ. ಜೆ. ಕುಮಾರನಾಯಕ ಪಾಲ್ಗೊಳ್ಳಲಿದ್ದಾರೆ.

ಸಂಜೆ 4.30ಕ್ಕೆ ನಡೆಯುವ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜು ಆಡಳಿತ ಮಂಡಳಿಯ ಅಧ್ಯಕ್ಷ ಡಾ. ಎಸ್.ಎ. ಪಾಟೀಲ ವಹಿಸಲಿದ್ದಾರೆ. ಎಸ್‌ಎವಿವಿಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಐ.ಕ್ಯೂ.ಎ.ಸಿ ಸಂಚಾಲಕ ಡಾ. ಡಿ.ಎಲ್. ಪವಾರ ಉಪಸ್ಥಿತಿ ವಹಿಸುತ್ತಾರೆ ಎಂದು ಕೇಶಣ್ಣವರ ತಿಳಿಸಿದ್ದಾರೆ.

## ಬೀದಿ ವ್ಯಾಪಾರಿಗಳಿಗೆ ಆಹಾರ ಸುರಕ್ಷತಾ ಲೈಸನ್ಸ್ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದ ಬೀದಿ ವ್ಯಾಪಾರಿಗಳಿಗೆ ನಗರಸಭೆ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ವತಿಯಿಂದ ಗದಗ ನಗರದ ತಿಲಕ್ ಪಾರ್ಕ್ ಹತ್ತಿರ ಐಸಿಇ ಹಾಗೂ ಆಹಾರ ಸುರಕ್ಷತಾ ಲೈಸನ್ಸ್ ವಿತರಣಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೀದಿ ವ್ಯಾಪಾರಿಗಳ ಸಂಘದ ಜಿಲ್ಲಾಧ್ಯಕ್ಷ ಮಕ್ತುಂಸಾಬ ನಾಲಬಂದ ವಹಿಸಿಕೊಂಡಿದ್ದರು. ಕೃಷ್ಣಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಗದಗ ಉಪವಿಭಾಗಾಧಿಕಾರಿ ಗಂಗಪ್ಪ ಎಮ್, ಆಹಾರ ಸುರಕ್ಷತಾ ನೋಡಲ್ ಅಧಿಕಾರಿ ವಿವೇಕ ತ್ರಿಮಲ್ಲೇ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಬಸರಾಜ ಮಲ್ಲೂರ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಎಮ್.ವಿ. ಸಂತೋಷ, ಎಸ್.ಬಿ.ಐ. ಬ್ಯಾಂಕಿನ ಶಿವಾನಂದ ಪೊಶೆಟ್ಟಿ, ನಗರಸಭೆ ಪೌರಾಯುಕ್ತರು, ಸಮುದಾಯ ಸಂಘಟನಾಧಿಕಾರಿ ಶ್ರೀಶೈಲಗೌಡ ಸಂಕನಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಪಾಲ್ಗೊಂಡಿದ್ದರು.

ಪಟ್ಟಣ ಮಾರಾಟ ಸಮಿತಿ ಸದಸ್ಯರಾದ ರಮೇಶ ಮುಳಗುಂದ, ಅನ್ವರ್ ಶಿರಹಟ್ಟಿ, ಮಂಜುನಾಥ, ಮಾರುತಿ ಸೋಳಂಕಿ, ತಬರೇಜ ಪಠಾಣ, ರಾಜಾಖಾನ ಪಠಾಣ, ಸಿ.ಎಲ್.ಎಫ್. ಅಧ್ಯಕ್ಷರಾದ ಅಶ್ವಿನಿ ಬಳ್ಳಾರಿ, ರಶಿದಾ ನದಾಫ್, ಫಾತೀಮಾ ಧಾರವಾಡ, ರಜೀಯಾ ಹತ್ತಿವಾಲೆ, ಬಾಷಾಸಾಬ ಮಲ್ಲಸಮುದ್ರ, ಶಹರ ಕಮಿಟಿ ಅಧ್ಯಕ್ಷ ಜಹಾಂಗೀರ ಮುಳಗುಂದ, ಫಯಾಜ್ ನಾರಾಯಣಕೇರಿ, ರಾಮವ್ವ ಲಮಾಣಿ, ಕುತೇಜಾ ದೊಡ್ಡಮನಿ ಉಪಸ್ಥಿತರಿದ್ದರು. ನಿಂಗನಗೌಡ ಮಾಲಿಪಾಟೀಲ ಕಾರ್ಯಕ್ರಮ ನಿರೂಪಿಸಿದರು.

## ರಾಷ್ಟ್ರೀಯ ಐಕ್ಯತಾ ಸಪ್ತಾಹ ಪ್ರಮಾಣ ವಚನ ಸ್ವೀಕಾರ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಐಕ್ಯತಾ ಸಪ್ತಾಹ ಕಾರ್ಯಕ್ರಮದ ನಿಮಿತ್ತ ಗದಗ ಜಿಲ್ಲಾಡಳಿತದಲ್ಲಿ ರಾಷ್ಟ್ರೀಯ ಐಕ್ಯತಾ ಪ್ರಮಾಣವಚನವನ್ನು ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್ ಬೋಧಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಡಿಡಿಎಲ್‌ಆರ್ ರುದ್ರಣ್ಣಗೌಡ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧಿಕಾರಿ ಶರಣು ಗೋಗೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಉಪನಿರ್ದೇಶಕರಾದ ಪದ್ಮಾವತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಶಿಕ್ಷಕರ ದೌರ್ಜನ್ಯ ಆರೋಪ: ವಿದ್ಯಾರ್ಥಿ ಆತ್ಮಹತ್ಯೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯ ರಾಜೇಂದ್ರ ಪ್ಲೇಸ್ ಮೆಟ್ರೋ ನಿಲ್ದಾಣದಲ್ಲಿ ಹಳಿಗೆ ಹಾರಿ 10ನೇ ತರಗತಿ ವಿದ್ಯಾರ್ಥಿಯೊಬ್ಬ ಆತ್ಮಹತ್ಯೆ ಮಾಡಿಕೊಂಡಿದ್ದು, ಸಾವಿಗೂ ಮುನ್ನ ಆತ ಬರೆದಿರುವ ಡೆತ್ ನೋಟ್‌ನಲ್ಲಿ ಶಿಕ್ಷಕರಿಂದ ದೌರ್ಜನ್ಯದ ಆರೋಪ ಮಾಡಿದ್ದಾನೆ ಎಂದು ವರದಿಗಳು ಹೇಳಿವೆ.

ವಿದ್ಯಾರ್ಥಿಯ ತಂದೆ ನೀಡಿರುವ ದೂರಿನಲ್ಲಿ, ತನ್ನ ಮಗ ಹಲವು ಶಿಕ್ಷಕರ ನಿರಂತರ ಕಿರುಕುಳದಿಂದಾಗಿ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದ ಎಂದು ಹೇಳಿದ್ದಾರೆ ಎಂದು ವರದಿಯಾಗಿದೆ.

## ಧರ್ಮ ಜಾಗೃತಿ ಕಾರ್ಯಕ್ರಮ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಖಾನತೋಟ ವೀರನಾರಾಯಣ ದೇವಸ್ಥಾನ ಹತ್ತಿರ ಶ್ರೀ ಬಾಲಮಾರುತಿ ದೇವಸ್ಥಾನದ ಬಳಿ ಕ್ರಾಂತಿಸೇನಾ, ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಳ, ಶ್ರೀ ಜಗದಂಬಾ ಸೇವಾ ಸಮಿತಿ, ಶ್ರೀ ಬಾಲ ಮಾರುತಿ ಪಾಲಕಿ ಸೇವಾ ಸಮಿತಿ, ಉಪನಯನ ಸಮಿತಿಯ ವತಿಯಿಂದ ನ. 26ರಂದು 4ನೇ ವರ್ಷದ ಎಸ್.ಎಸ್.ಕೆ ಹಾಗೂ ಕ್ಷತ್ರಿಯ ಸಮಾಜದ ಸಾಮೂಹಿಕ ವಿವಾಹ ಹಾಗೂ ಉಪನಯನ ಕಾರ್ಯಕ್ರಮ ನಡೆಯಲಿದ್ದು,



ಇದರ ಅಂಗವಾಗಿ ನ. 22ರಂದು ಸಾಯಂಕಾಲ 5 ಗಂಟೆಗೆ ಸನಾತನ ಹಿಂದೂ ಸಮಾಜದ ಯುವತಿಯರಿಗೆ ಹಿಂದೂ ಸಂಸ್ಕಾರದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಭಾಷಣಕಾರರಾಗಿ ಪ್ರಖರ ವಾಗ್ಮಿ ಚೈತ್ರಾ ಕುಂದಾಪುರ ಆಗಮಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ವಿಶೇಷವಾಗಿ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಹಾಗೂ ಸರ್ವ ಹಿಂದೂ ಸಮಾಜದ ಬಾಂಧವರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಉಪನಯನ ಸಮಿತಿಯ ಅಧ್ಯಕ್ಷ ಉಮೇಶ್ ಹಬೀಬ, ಸಂಸ್ಥಾಪಕರು ಬಾಬು ಬಾಕಳೆ ಹಾಗೂ ಉಪನಯನ ಸಮಿತಿಯ ಪದಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.


### ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ

# ರೈತರ ಹೋರಾಟಕ್ಕೆ ನಮ್ಮ ಬೆಂಬಲವಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕಾಗಿ ರೈತರು ನಡೆಸುತ್ತಿರುವ ಹೋರಾಟಕ್ಕೆ ನನ್ನ ಸಂಪೂರ್ಣ ಬೆಂಬಲವಿದೆ. ಆದರೆ, ವಾಸ್ತವಿಕತೆಯ ನೆಲಗಟ್ಟಿನಲ್ಲಿ ಹೋರಾಟ ಸಾಗಬೇಕು ಮತ್ತು ಅದು ದಾರಿ ತಪ್ಪದಿರಲಿ ಎಂದು ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಹೇಳಿದರು.

ಈ ಕುರಿತು ಗುರುವಾರ ಕರೆದಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.



ಬೆಂಬಲ ಬೆಲೆ ಘೋಷಿಸಿದ್ದರಿಂದ ರೈತರು ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳ ಬೆಳೆದಿದ್ದಾರೆ. ಈ ವೇಳೆಗಾಗಲೇ ಖರೀದಿ ಕೇಂದ್ರ ಶುರು ಮಾಡಬೇಕಿತ್ತು. ಆದರೆ ರಾಜ್ಯ ಸರ್ಕಾರದ ಬಳಿ ದುಡ್ಡಿಲ್ಲ. ಗ್ಯಾರಂಟಿ ಯೋಜನೆ ನೆಪದಲ್ಲಿ ಖಜಾನೆ ಖಾಲಿ ಆಗಿದೆ. ಈಗ ಮೆಕ್ಕೆಜೋಳ ಖರೀದಿಸುವುದು ಸರ್ಕಾರಕ್ಕೆ ಆಗದ ಕೆಲಸ. ಆದರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪರಸ್ಪರ ಚರ್ಚಿಸಿ ನಿರ್ಧಾರ ತೆಗೆದುಕೊಂಡಾಗ ಮಾತ್ರ ಖರೀದಿ ಕೇಂದ್ರ ಆರಂಭ ಆಗಬಹುದು. ಇಲ್ಲದಿದ್ದರೆ ಎಷ್ಟೇ ಹೋರಾಟ ಮಾಡಿದರೂ ಪ್ರಯೋಜನ ಇಲ್ಲ ಎಂದು ತಿಳಿಸಿದ ಅವರು, ಆಮರಣಾಂತ ಉಪವಾಸ ನಡೆಸುತ್ತಿರುವ ಕುಮಾರ ಮಹಾರಾಜರಿಗೆ ಹೆಚ್ಚು ಕಡಿಮೆ ಆದರೆ ಇಡೀ ಊರಿಗೆ ಕೆಟ್ಟ ಹೆಸರು ಬರುತ್ತದೆ ಎಂದರು.

ಪದೇ ಪದೇ ಊರನ್ನು ಬಂದ್ ಮಾಡುವುದರಿಂದ ಸಾರ್ವಜನಿಕರಿಗೆ, ಕೂಲಿಕಾರರಿಗೆ, ವ್ಯಾಪಾರಸ್ಥರಿಗೆ ತೊಂದರೆ ಆಗುತ್ತದೆ. ಕಾರಣ ಹೋರಾಟಗಾರರು ಬಂದ್‌ಗೆ ಕರೆ ನೀಡುವ ಮೊದಲು ಸಾಕಷ್ಟು ಬಾರಿ ವಿಚಾರ ಮಾಡಬೇಕು ಎಂದರಲ್ಲದೆ, ರೈತರ ನ್ಯಾಯಯುತ ಬೇಡಿಕೆಗೆ ಯಾವಾಗಲೂ ನಮ್ಮ ಬೆಂಬಲ ಇದ್ದೇ ಇರುತ್ತದೆ ಎಂದು ಸ್ಪಷ್ಟಪಡಿಸಿದರು.

ಎಸ್.ಪಿ. ಪಾಟೀಲ, ವಿ.ಜಿ. ಪಡಿಗೇರಿ, ಸೋಮಣ್ಣ ಉಪನಾಳ, ಬಸವೇಶ ಮಹಾಂತಶೆಟ್ಟರ, ಅಪ್ಪಣ್ಣ ಸಾಲಿ ಮಾತನಾಡಿದರು. ಚಂಬಣ್ಣ ಬಾಳಿಕಾಯಿ, ಡಿ.ಬಿ. ಬಳಿಗಾರ, ನಿಂಗಪ್ಪ ಬನ್ನಿ, ಶಾಂತಣ್ಣ ಬಳ್ಳಾರಿ, ನಿಂಗಪ್ಪ ಹುನಗುಂದ, ಹನಮಂತಪ್ಪ ತಳವಾರ, ಎನ್.ಎನ್. ನೆಗಳೂರ, ಬಸಣ್ಣ ಹಂಜಿ, ಮಹಾದೇವಪ್ಪ ಅಣ್ಣಿಗೇರಿ, ಸೋಮಣ್ಣ ಡಾಣಗಲ್ಲ, ವೀರಣ್ಣ ಪವಾಡದ, ಗಂಗಾಧರ ಮೆಣಸಿನಕಾಯಿ, ಎಂ.ಆರ್. ಪಾಟೀಲ ಮತ್ತಿತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka